ಶುಕ್ರವಾರ 31.10.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 86
Digital Varthe Kannada Daily
Volume 01 - Issue 86
Friday 31.10.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE

digitalvarthe@gmail.com
www.digitalvarthe.com

## ಮದುವೆಗೆ ಮುನ್ನ ಹೃದಯಾಘಾತದಿಂದ ವಧು ಸಾವು



ಚಿಕ್ಕಮಗಳೂರು: ಅಜ್ಜಂಪುರ ತಾಲೂಕಿನ ಸೊಲ್ಲಾಪುರ ಗ್ರಾಮದ ವಧು ಶೃತಿ (32) ಅವರು ಮದುವೆಗೆ ಮುನ್ನ ಹೃದಯಾಘಾತದಿಂದ ಮರಣಕ್ಕೆ ಈಡಾಗಿದ್ದಾರೆ.

ಇಂದು ತರೀಕೆರೆ ನಗರದ ಅನ್ನಪೂರ್ಣೇಶ್ವರಿ ಕಲ್ಯಾಣ ಮಂಟಪದಲ್ಲಿ ಶೃತಿ ಮತ್ತು ತರೀಕೆರೆಯ ದಿಲೀಪ್ ಅವರ ಜೊತೆ ವಿವಾಹ ನಿಗದಿಯಾಗಿತ್ತು. ಎರಡೂ ಕುಟುಂಬಗಳು ಮದುವೆಯ ಸಿದ್ಧತೆಗಳಲ್ಲಿ ತೊಡಗಿದ್ದ ಸಮಯದಲ್ಲಿ, ಗುರುವಾರ ವಧು ಶೃತಿ ಅವರು ತನ್ನ ಮನೆಯಲ್ಲಿದ್ದಾಗ ಹಠಾತ್ ಹೃದಯಾಘಾತಕ್ಕೆ ತುತ್ತಾಗಿದ್ದಾರೆ. ಇತ್ತೀಚಿನ ದಿನಗಳಲ್ಲಿ ಯುವಕ-ಯುವತಿಯರಲ್ಲೂ ಹೃದಯಾಘಾತದ ಪ್ರಕರಣಗಳು ಹೆಚ್ಚುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ವೈದ್ಯಕೀಯ ತಜ್ಞರು, ಒತ್ತಡ, ಅಸಮತೋಲಿತ ಆಹಾರ ಮತ್ತು ಅತಿ ಕೆಲಸದಿಂದಾಗಿ ಯುವ ಪೀಳಿಗೆಯಲ್ಲಿ ಹೃದಯ ರೋಗಗಳು ಹೆಚ್ಚಾಗುತ್ತಿರುವುದಾಗಿ ಎಚ್ಚರಿಸುತ್ತಾರೆ.

ಮಗಳ ಮದುವೆಯನ್ನು ಕಂಡು ಸಂತೋಷಿಸಲು ಸಿದ್ಧರಾಗಿದ್ದ ಹಿರಿಯರು, ಈಗ ಅವಳ ಅಕಾಲ ಮರಣದ ದುಃಖ ಅನುಭವಿಸುತ್ತಿದ್ದಾರೆ. ಇನ್ನೂ ವರನ ಕುಟುಂಬವೂ ಈ ಸುದ್ದಿ ಕೇಳಿ ತೀವ್ರ ದುಃಖ ಹೊರಹಾಕಿದ್ದಾರೆ. ವಧು ಶೃತಿ ದೇಹವನ್ನು ಮನೆಯಲ್ಲೇ ಇರಿಸಿ, ಬಂಧು-ಬಳಗ ಮತ್ತು ಗ್ರಾಮಸ್ಥರು ಅಂತಿಮ ನಮನ ಸಲ್ಲಿಸಲಿದ್ದಾರೆ.

## ಮಗಳ ಶವ ಪರೀಕ್ಷೆಗೆ ಲಂಚ ವಸೂಲಿ; ಕಣ್ಣೀರಿಟ್ಟ ಮಾಜಿ ಸಿಎಫ್‌ಒ

# ಎಸ್‌ಐ, ಕಾನ್‌ಸ್ಟೇಬಲ್ ಅಮಾನತು



ಬೆಂಗಳೂರು: ಮೃತ ಮಗಳ ಶವ ಪರೀಕ್ಷೆ ಮಾಡಿಸಲು ಹಣ ವಸೂಲಿ ಮಾಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಮಗಳ ಸಾವಿನ ನೋವಿನಲ್ಲಿದ್ದ ತಂದೆಗೆ ಲಂಚದ ಕಾಟ ಕೊಟ್ಟಿದ್ದ ವಿಚಾರ ಬೆಳಕಿಗೆ ಬಂದಿದೆ.

ಅಕ್ಷಯ ಎಂಬ ಯುವತಿ ಮಿದುಳು ರಕ್ತಸ್ರಾವದಿಂದ ಮೃತಪಟ್ಟಿದ್ದರು. ಮಗಳ ಸಾವಿನ ವಿಚಾರ ತಿಳಿದು ತಂದೆ-ತಾಯಿ ಮುಂಬೈನಿಂದ ಬಂದಿದ್ದರು. ಶವ ಪರೀಕ್ಷೆ ಮಾಡಲು ಲಂಚ ಸ್ವೀಕರಿಸಲಾಗಿದೆ. ಇದರಿಂದ ಬೇಸತ್ತು ಯುವತಿ ತಂದೆ ಫೇಸ್‌ಬುಕ್‌ನಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ. ಪುತ್ರಿ ಸಾವಿನ ಶೋಕದಲ್ಲಿದ್ದ 64 ವಯಸ್ಸಿನ ತಂದೆ ಕರಾಳ ಅನುಭವ ಬಿಚ್ಚಿಟ್ಟಿದ್ದಾರೆ.

ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ನಿವೃತ್ತ ಸಿಎಫ್‌ಒ ಶಿವಕುಮಾರ್ ಅವರ ಮಗಳು ಅಕ್ಷಯ ಸೆ.18 ರಂದು ಮಿದುಳು ರಕ್ತಸ್ರಾವದಿಂದ ಮೃತಪಟ್ಟಿದ್ದರು. ಮಗಳ ಸಾವಿನ ವಿಚಾರ ತಿಳಿದು ತಂದೆ-ತಾಯಿ ಮುಂಬೈನಿಂದ ಬೆಂಗಳೂರಿಗೆ ಬಂದಿದ್ದರು. ಶವ ಸಾಗಿಸಲು ಅಂಬುಲೆನ್ಸ್ ಚಾಲಕ ನಿಗದಿತ 5 ಸಾವಿರಕ್ಕಿಂತ 2,000 ರೂ. ಹೆಚ್ಚುವರಿ ಹಣ ಪಡೆದಿದ್ದ.

ಕಸುವಿನಹಳ್ಳಿಯಿಂದ ಕೋರಮಂಗಲ ಆಸ್ಪತ್ರೆಗೆ ಶವ ಸಾಗಿಸಲು 5 ಸಾವಿರ ರೂ.. ನಂತರ ಮರಣೋತ್ತರ ಪರೀಕ್ಷೆ ವೇಳೆ ಪೊಲೀಸರು ಹಣಕ್ಕಾಗಿ ಒರಟಾಗಿ ವರ್ತಿಸಿದ್ದಾರೆ. ಆದರೆ, ಶಿವಕುಮಾರ್ ಸ್ನೇಹಿತ ಮಧ್ಯಪ್ರವೇಶಿಸಿದಾಗ ಪೊಲೀಸರು ಸುಮ್ಮನಾಗಿದ್ದಾರೆ ಎನ್ನಲಾಗಿದೆ

ಮಗಳ ಕಣ್ಣುಗಳನ್ನ ದಾನ ಮಾಡಿ ಸ್ಮಶಾನದಲ್ಲೂ ಶಿವಕುಮಾರ್ ಹಣ ನೀಡಿದ್ದಾರೆ. ಆದರೆ, ಮರಣೋತ್ತರ ಪರೀಕ್ಷೆ ಬಳಿಕ ಪೊಲೀಸ್ ಠಾಣೆಗೆ ಹೋಗಿದ್ರು. ಈ ವೇಳೆ ಠಾಣೆಯಲ್ಲೇ UDR ಕಾಪಿ ಪಡೆಯಲು ಕೂಡ 5 ಸಾವಿರ ರೂ. ಲಂಚ ಪಡೆದಿದ್ದಾರೆ. ಬಳಿಕ ಮರಣ ಪ್ರಮಾಣ ಪತ್ರ ಪಡೆಯಲು ಸಮೀಕ್ಷೆ ಇದ್ದ ಕಾರಣ 2 ಸಾವಿರ ಲಂಚ ಕೊಟ್ಟಿದ್ದಾರೆ. ಈ ಎಲ್ಲಾ ವಿಚಾರಗಳಿಂದ ಬೇಸತ್ತು ಸೋಷಿಯಲ್ ಮೀಡಿಯಾದಲ್ಲಿ ಶಿವಕುಮಾರ್ ಅವರು ಪೋಸ್ಟ್ ಹಂಚಿಕೊಂಡಿದ್ದಾರೆ

# ಬಲವಂತದ ಮದುವೆ ತಡೆಯಲು ಬಂದ ಪ್ರಿಯತಮನೇ ಬಲಿ

**ಲಕ್ನೋ:** ಉತ್ತರ ಪ್ರದೇಶದ ಹಮೀರ್‌ಪುರ ಜಿಲ್ಲೆಯ ಪರ್ಚ್ ಗ್ರಾಮದಲ್ಲಿ ತನ್ನ ಪ್ರೇಯಸಿಯ ಬಲವಂತದ ಮದುವೆಯನ್ನು ತಡೆಯಲು ಪ್ರಯತ್ನಿಸಿದ ವ್ಯಕ್ತಿಯನ್ನು ಥಳಿಸಿ ಕೊಂದಿರುವ ಘಟನೆ ನಡೆದಿದೆ. ಹತ್ಯೆಯಾದ ವ್ಯಕ್ತಿ ರವಿ (35). ಆತನ ಪ್ರೇಯಸಿ ಮನಿಷಾಳನ್ನು ಆಕೆಯ ಮನೆಯವರು ಬಲವಂತವಾಗಿ ಮದುವೆ ಮಾಡುತ್ತಿರುವುದನ್ನು ತಿಳಿದು, ಆಕೆಯನ್ನು ಭೇಟಿಯಾಗಲು ಗ್ರಾಮಕ್ಕೆ ತೆರಳಿದ್ದ. ಆದರೆ, ಈ ವಿಷಯ ತಿಳಿದ ಮನಿಷಾಳ ಕುಟುಂಬದವರು ಮತ್ತು ಗ್ರಾಮಸ್ಥರು ರವಿಯನ್ನು ಕಂಬಕ್ಕೆ ಕಟ್ಟಿ ಥಳಿಸಿದ್ದಾರೆ.

ರವಿಯ ಮೇಲೆ ಗ್ರಾಮಸ್ಥರು ಮತ್ತು ಮನಿಷಾಳ ಕುಟುಂಬದವರು ಒಟ್ಟಾಗಿ ತೀವ್ರವಾಗಿ ಹಲ್ಲೆ ನಡೆಸಿದ್ದಾರೆ. ಗಂಭೀರವಾಗಿ ಗಾಯಗೊಂಡ ರವಿ ಕುಡಿಯಲು ನೀರು ಕೇಳಿದ್ದಾನೆ, ಆದರೆ ಯಾರೂ ನೀರು ನೀಡಿಲ್ಲ. ಕೊನೆಗೆ ರವಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಮನಿಷಾಳ ಚಿಕ್ಕಪ್ಪ ಪಿಂಟು ಕೊಲೆ ಆರೋಪದಿಂದ ತಪ್ಪಿಸಿಕೊಳ್ಳಲು ಆತ್ಮಹತ್ಯೆಗೆ ಯತ್ನಿಸಿದ್ದಾನೆ. ನಂತರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಪೊಲೀಸರು ರವಿ ಮತ್ತು ಪಿಂಟು ಇಬ್ಬರನ್ನೂ ಮೌದಾಹದ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದರು. ಆದರೆ, ವೈದ್ಯರು ರವಿ ಈಗಾಗಲೇ ಮೃತಪಟ್ಟಿರುವುದಾಗಿ ದೃಢಪಡಿಸಿದರು. ಪಿಂಟುಗೆ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ರವಿಯ ಸಾವಿನ ಸುದ್ದಿ ತಿಳಿದ ಮನಿಷಾ, ತಾನೂ ಕತ್ತು ಕೊಯ್ದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾಳೆ. ಮನಿಷಾ ಮತ್ತು ಪಿಂಟು ಇಬ್ಬರ ಸ್ಥಿತಿಯೂ ಗಂಭೀರವಾಗಿದೆ ಎಂದು ಮೂಲಗಳು ತಿಳಿಸಿವೆ. ಪೊಲೀಸರು ಮನಿಷಾಳನ್ನು ಮೌದಾಹದ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದ್ದಾರೆ.

ಪಿಂಟುನ ಪತ್ನಿ ಪೊಲೀಸರಿಗೆ ದೂರು ನೀಡಿದ್ದು , ರವಿ ನಮ್ಮ ಮನೆಗೆ ಬಂದು ಕೋಪದಿಂದ ಕೂಗಾಡಿದ. ಬಾಗಿಲು ತೆರೆದಾಗ ನನ್ನ ಪತಿಯ ಮೇಲೆ ಚಾಕುವಿನಿಂದ ಹಲ್ಲೆ ಮಾಡಿದ ಎಂದು ಆರೋಪಿಸಿದ್ದಾರೆ. ಆದರೆ, ಪೊಲೀಸರು ಈ ದೂರಿನ ಸತ್ಯಾಸತ್ಯತೆಯನ್ನು ತನಿಖೆ ನಡೆಸುತ್ತಿದ್ದಾರೆ

# ರಾಮಮಂದಿರ ನಿರ್ಮಾಣ ಕಾರ್ಯ ಪೂರ್ಣ: ನವೆಂಬರ್ 25 ಅದ್ದೂರಿ ಧ್ವಜಾರೋಹಣ




**ಅಯೋಧ್ಯೆ:** ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್‌ನಿಂದ ನಿರ್ಮಿಸಲಾದ ರಾಮಮಂದಿರದ ಕಾಮಗಾರಿ ಸಂಪೂರ್ಣಗೊಂಡಿದ್ದು , ಈ ಭವ್ಯ ದೇವಾಲಯಕ್ಕಾಗಿ ಒಟ್ಟು 3,000 ಕೋಟಿ ರೂಪಾಯಿಗಳ ದೇಣಿಗೆ ಸಂಗ್ರಹವಾಗಿದೆ. ಈ ಪೈಕಿ 1,500 ಕೋಟಿ ರೂಪಾಯಿಗಳನ್ನು ದೇವಾಲಯದ ನಿರ್ಮಾಣ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಆವರಣದ ಸುತ್ತಮುತ್ತಲಿನ ಕಾಮಗಾರಿಗಳಿಗೆ ಖರ್ಚು ಮಾಡಲಾಗಿದೆ ಎಂದು ಟ್ರಸ್ಟ್‌ನ ಅಧಿಕಾರಿಗಳು ತಿಳಿಸಿದ್ದಾರೆ.
ಭಗವಾನ್ ಶ್ರೀರಾಮನಿಗೆ ಸಮರ್ಪಿತವಾದ ಈ ದೇವಾಲಯವು ಆರು ಸಹಾಯಕ ದೇವಾಲಯಗಳೊಂದಿಗೆ ಭವ್ಯವಾಗಿ ಪೂರ್ಣಗೊಂಡಿದೆ. ಶಿವ, ಗಣೇಶ, ಹನುಮಾನ್, ಸೂರ್ಯ, ಭಗವತಿ ಮತ್ತು ಅನ್ನಪೂರ್ಣ ದೇವಿಗೆ ಮೀಸಲಾದ ದೇವಾಲಯಗಳ ನಿರ್ಮಾಣವೂ ಈಗ ಸಂಪೂರ್ಣವಾಗಿದೆ.

ರಾಮಮಂದಿರದ ನಿರ್ಮಾಣ ಕಾರ್ಯವು ಔಪಚಾರಿಕವಾಗಿ ಪೂರ್ಣಗೊಂಡಿರುವುದರ ಸಂಕೇತವಾಗಿ, ಪ್ರತಿ ದೇವಾಲಯದ ಮೇಲೆ ಧ್ವಜಗಳು ಮತ್ತು ಕಲಶಗಳನ್ನು ಸ್ಥಾಪಿಸಲಾಗಿದೆ. ಈ ಐತಿಹಾಸಿಕ ಸಂದರ್ಭವನ್ನು ಗುರುತಿಸಲು, ನವೆಂಬರ್ 25, 2025ರಂದು ಅದ್ದೂರಿ ಧ್ವಜಾರೋಹಣ ಸಮಾರಂಭವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಆಹ್ವಾನಿಸಲಾಗಿದ್ದು , ಭಾರತ ಮತ್ತು ವಿದೇಶಗಳಿಂದ ಸಾವಿರಾರು ಭಕ್ತರು, ಸಂತರು, ಮತ್ತು ಗಣ್ಯರು ಆಗಮಿಸುವ ನಿರೀಕ್ಷೆಯಿದೆ. ಈ ಸಮಾರಂಭವು ರಾಮಮಂದಿರದ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ವಿಶ್ವದಾದ್ಯಂತ ಎತ್ತಿ ತೋರಿಸಲಿದೆ.

ರಾಮಮಂದಿರ ಟ್ರಸ್ಟ್‌ಗೆ ಪ್ರಪಂಚದಾದ್ಯಂತದ ಭಕ್ತರಿಂದ ಅಗಾಧ ಬೆಂಬಲ ವ್ಯಕ್ತವಾಗಿದೆ. ಒಟ್ಟು 3,000 ಕೋಟಿ ರೂಪಾಯಿಗಳ ದೇಣಿಗೆ ಸಂಗ್ರಹವಾಗಿದ್ದು , ಇದರಲ್ಲಿ 1,500 ಕೋಟಿ ರೂಪಾಯಿಗಳನ್ನು ದೇವಾಲಯದ ನಿರ್ಮಾಣಕ್ಕೆ , ಆವರಣದ ಸುತ್ತಮುತ್ತಲಿನ ಮೂಲಸೌಕರ್ಯ ಅಭಿವೃದ್ಧಿಗೆ, ಮತ್ತು ಇತರ ಸಂಬಂಧಿತ ಕಾಮಗಾರಿಗಳಿಗೆ ಖರ್ಚು ಮಾಡಲಾಗಿದೆ. ಉಳಿದ 1,800 ಕೋಟಿ ರೂಪಾಯಿಗಳನ್ನು ದೇವಾಲಯದ ಅಂತಿಮ ಸ್ಪರ್ಶ, ಸೌಂದರ್ಯೀಕರಣ, ಮತ್ತು ನಿರ್ವಹಣೆಗೆ ಬಳಸಲಾಗುವುದು. ಈ ಹಣವನ್ನು ಭಕ್ತರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸಲು, ದೇವಾಲಯದ ಆವರಣದಲ್ಲಿ ರಸ್ತೆಗಳು, ಭದ್ರತೆ, ಮತ್ತು ಇತರ ಸೌಕರ್ಯಗಳ ಅಭಿವೃದ್ಧಿಗೆ ಬಳಸಲಾಗುವುದು ಎಂದು ಟ್ರಸ್ಟ್‌ನ ಅಧಿಕಾರಿಗಳು ತಿಳಿಸಿದ್ದಾರೆ.

ನವೆಂಬರ್ 25ರ ಧ್ವಜಾರೋಹಣ ಸಮಾರಂಭವು ಈ ದೇವಾಲಯದ ನಿರ್ಮಾಣ ಪೂರ್ಣಗೊಂಡಿರುವುದನ್ನು ಆಚರಿಸುವ ಒಂದು ಐತಿಹಾಸಿಕ ಕ್ಷಣವಾಗಲಿದೆ. ಈ ಕಾರ್ಯಕ್ರಮಕ್ಕೆ ಸಾವಿರಾರು ಭಕ್ತರ ಆಗಮನದಿಂದ ಅಯೋಧ್ಯೆಯ ಆಧ್ಯಾತ್ಮಿಕ ವಾತಾವರಣವು ಇನ್ನಷ್ಟು ಚೈತನ್ಯಗೊಳ್ಳಲಿದೆ. ಪ್ರಧಾನಮಂತ್ರಿ ಮೋದಿಯವರ ಭಾಗವಹಿಸುವಿಕೆಯು ಈ ಕಾರ್ಯಕ್ರಮಕ್ಕೆ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮನ್ನಣೆ ತಂದುಕೊಡಲಿದೆ. ರಾಮಮಂದಿರವು ಭಾರತದ ಧಾರ್ಮಿಕ ಏಕತೆಯ ಸಂಕೇತವಾಗಿ, ಜಗತ್ತಿನಾದ್ಯಂತ ಭಕ್ತರಿಗೆ ಆಧ್ಯಾತ್ಮಿಕ ಕೇಂದ್ರವಾಗಿ ಮೆರೆಯಲಿದೆ.

# ತಲೆಗೆ ಚೆಂಡು ಬಿದ್ದು ಆಸ್ಟ್ರೇಲಿಯಾದ ಯುವ ಕ್ರಿಕೆಟಿಗ ಬೆನ್ ಆಸ್ಟಿನ್ ದುರ್ಮರಣ



ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಟಿ20 ಪಂದ್ಯ ಮಳೆಯಿಂದ ರದ್ದಾಗಿದ್ದ ಈ ಸಮಯದಲ್ಲಿ, ಆಸ್ಟ್ರೇಲಿಯಾದ ಕ್ರಿಕೆಟ್ ಪ್ರಪಂಚವನ್ನು ದುಃಖದ ಅಲೆ ಆವರಿಸಿದೆ. ದೇಶದ 17 ವರ್ಷದ ಯುವ ಪ್ರತಿಭೆ ಬೆನ್ ಆಸ್ಟಿನ್ ಅಭ್ಯಾಸ ಮಾಡುತ್ತಿದ್ದಾಗ ತಲೆಗೆ ಚೆಂಡು ಬಡಿದು ಮೃತಪಟ್ಟಿದ್ದಾರೆ. ಈ ದುಃಖದ ಘಟನೆ ಆಸ್ಟ್ರೇಲಿಯಾದ ವಿಕ್ಟೋರಿಯಾ ರಾಜ್ಯದ ವಾಲಿ ಟೂ ರಿಸರ್ವ್ ಮೈದಾನದಲ್ಲಿ ನಡೆದಿದೆ. ಬೆನ್ ಆಸ್ಟಿನ್ ಫರ್ನ್ ಗಲ್ಲಿ ಕ್ರಿಕೆಟ್ ಕ್ಲಬ್ ತರಬೇತಿ ನೀಡುತ್ತಿದ್ದ ನೆಟ್ಸ್ ಅಭ್ಯಾಸದಲ್ಲಿ ಭಾಗವಹಿಸಿದ್ದರು. ಅಭ್ಯಾಸದ ವೇಳೆ, ಒಂದು ಚೆಂಡು ನೇರವಾಗಿ ಅವರ ತಲೆಗೆ ಬಡಿದು ಗಂಭೀರ ಗಾಯವಾಗಿತ್ತು.

ಘಟನೆಯ ನಂತರ, ತಕ್ಷಣ ಅಲ್ಲಿದ್ದ ಆಟಗಾರರು ಮತ್ತು ಕೋಚ್‌ಗಳು ಬೆನ್‌ಗೆ ಪ್ರಥಮ ಚಿಕಿತ್ಸೆ ನೀಡಿದರು. ಪೊಲೀಸರು ಮತ್ತು ಆಂಬ್ಯುಲೆನ್ಸ್ ಸೇವೆಗಳು ತ್ವರಿತಗತಿಯಲ್ಲಿ ಮೈದಾನಕ್ಕೆ ತಲುಪಿದವು. ಗಂಭೀರ ಸ್ಥಿತಿಯಲ್ಲಿರುವ ಬೆನ್ ಅವರನ್ನು ತುರ್ತು ಆಸ್ಪತ್ರೆಗೆ ದಾಖಲಿಸಲಾಯಿತು. ಅವರನ್ನು ಲೈಫ್ ಸಪೋರ್ಟ್ ಸಿಸ್ಟಮ್‌ನಲ್ಲಿ ಇರಿಸಿ, ಸಾಧ್ಯವಿರುವ ಎಲ್ಲಾ ವೈದ್ಯಕೀಯ ಚಿಕಿತ್ಸೆಗಳನ್ನು ನೀಡಲಾಯಿತು. ರಿಂಗ್‌ವುಡ್ ಮತ್ತು ಜಿಲ್ಲಾ ಕ್ರಿಕೆಟ್ ಅಸೋಸಿಯೇಷನ್ ಅಧ್ಯಕ್ಷ ಮೈಕೆಲ್ ಫಿನ್ ಅವರು ಚಿಕಿತ್ಸೆಗಾಗಿ ಎಲ್ಲಾ ಸಹಾಯ ಮಾಡುವುದಾಗಿ ಭರವಸೆ ನೀಡಿದ್ದರು. ಆದರೆ, ದುರದೃಷ್ಟವಶಾತ್, ಬೆನ್ ಆಸ್ಟಿನ್ ತಮ್ಮ ಪ್ರಾಣವನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ ಮತ್ತು ಆಸ್ಪತ್ರೆಯಲ್ಲಿ ಅವರು ಅಸು ನೀಗಿದರು.

ಈ ದುಃಖದ ಸುದ್ದಿಯನ್ನು ಕ್ರಿಕೆಟ್ ಆಸ್ಟ್ರೇಲಿಯಾ (CA) ಅಧಿಕೃತವಾಗಿ ಖಚಿತಪಡಿಸಿದೆ. CA ತನ್ನ ಸಾಮಾಜಿಕ ಮಾಧ್ಯಮ ಖಾತೆಯಲ್ಲಿ ಶೋಕ ಸಂದೇಶವನ್ನು ಹಂಚಿಕೊಂಡು, ಬ್ಯಾಟಿಂಗ್ ಮಾಡುವಾಗ ಅಪಘಾತದಲ್ಲಿ ಸಾವನ್ನಪ್ಪಿದ 17 ವರ್ಷದ ಬೆನ್ ಆಸ್ಟಿನ್ ಅವರ ದುರಂತ ಸಾವಿನಿಂದ ಕ್ರಿಕೆಟ್ ಆಸ್ಟ್ರೇಲಿಯಾ ಆಘಾತಕ್ಕೊಳಗಾಗಿದೆ ಎಂದು ತಿಳಿಸಿದೆ.

# ಪೊಲೀಸರಿಂದ ತಪ್ಪಿಸಿಕೊಳ್ಳಲು ಹೋಗಿ ಆರೋಪಿ ಸಾವು, 3 ಪೊಲೀಸರ ಅಮಾನತು

**ಶಹಜಹಾನ್‌ಪುರ:** ಪೊಲೀಸರು ಜೂಜು ಅಡ್ಡ ಮೇಲೆ ದಾಳಿ ನಡೆಸುವ ಸಂದರ್ಭದಲ್ಲಿ ಅವರಿಂದ ತಪ್ಪಿಸಿಕೊಳ್ಳಲು ನೀರಿಗೆ ಹಾರಿ ಜೂಜುಕೋರನೊಬ್ಬ ಪ್ರಾಣ ಬಿಟ್ಟಿರುವ ಘಟನೆ ಉತ್ತರ ಪ್ರದೇಶದ ಶಹಜಹಾನ್‌ಪುರದಲ್ಲಿ ನಡೆದಿದೆ. ಘಟನೆಗೆ ಸಂಬಂಧಿಸಿದಂತೆ ಮೂವರು ಕಾನ್‌ಸ್ಟೆಬಲ್‌ಗಳನ್ನು ಅಮಾನತುಗೊಳಿಸಲಾಗಿದೆ. ಜೂಜು ಅಡ್ಡೆ ಮೇಲೆ ದಾಳಿ ನಡೆಸಲು ಬಂದಿದ್ದ ಪೊಲೀಸರನ್ನು ನೋಡಿ ಭಯಪಟ್ಟು ಆರು ಜನರು ಕೊತ್ವಾಲಿ ಪೊಲೀಸ್ ಠಾಣೆ ವ್ಯಾಪ್ತಿಯ ಖನ್ನೌತ್ ನದಿಗೆ ಹಾರಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ರಾಜೇಶ್ ದ್ವಿವೇದಿ ತಿಳಿಸಿದ್ದಾರೆ.

ಐವರು ಸುರಕ್ಷಿತವಾಗಿ ಹೊರಬರುವಲ್ಲಿ ಯಶಸ್ವಿಯಾದರೆ, ಜೂಜುಕೋರರಿಗೆ ಸಾಲ ನೀಡಲು ಅಲ್ಲಿಗೆ ಹೋಗಿದ್ದ ತಿವಾರಿ (28) ಎಂದು ಗುರುತಿಸಲಾದ ಒಬ್ಬ ವ್ಯಕ್ತಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾನೆ ಎಂದು ಎಸ್ಪಿ ತಿಳಿಸಿದ್ದಾರೆ. ಘಟನೆಯ ನಂತರ, ಮೃತರ ಕುಟುಂಬ ಸದಸ್ಯರು ಬುಧವಾರ ತಡರಾತ್ರಿ ಕೆರುಗಂಜ್ ರಸ್ತೆಯಲ್ಲಿ ಪ್ರತಿಭಟನೆ ನಡೆಸಿದ್ದಾರೆ. ಕಾನ್‌ಸ್ಟೆಬಲ್‌ಗಳಾದ ಪಂಕಜ್ ಕುಮಾರ್, ರಾಜೇಶ್ ಕುಮಾರ್ ಮತ್ತು ಅಮನ್ ಅವರನ್ನು ಅಮಾನತುಗೊಳಿಸಲಾಗಿದೆ ಮತ್ತು ತನಿಖೆಗೆ ಆದೇಶಿಸಲಾಗಿದೆ.

ಘಟನೆಯ ನಂತರ, ಪ್ರದೇಶದಲ್ಲಿ ಉದ್ವಿಗ್ನತೆ ಹರಡಿತು. ಕೋಪಗೊಂಡ ಕುಟುಂಬ ಸದಸ್ಯರು ಶವವನ್ನು ರಸ್ತೆಯಲ್ಲಿ ಇರಿಸಿ ಪೊಲೀಸರ ವಿರುದ್ಧ ಘೋಷಣೆಗಳನ್ನು ಕೂಗುವ ಮೂಲಕ ರಸ್ತೆ ತಡೆ ನಡೆಸಿದರು. ಹನುಮಾನ್ ಧಾಮ್ ದಡದಲ್ಲಿರುವ ಬಗ್ಗು ಘಾಟ್‌ನಲ್ಲಿ ಕೆಲವು ಯುವಕರು ಜೂಜಾಡುತ್ತಿದ್ದರು. ಯಾರೋ ಪೊಲೀಸರಿಗೆ ಮಾಹಿತಿ ನೀಡಿದರು. ಇಬ್ಬರು ಕಾನ್‌ಸ್ಟೆಬಲ್‌ಗಳು ತಕ್ಷಣ ಸ್ಥಳಕ್ಕೆ ಬಂದರು. ಪೊಲೀಸರನ್ನು ನೋಡಿದ ಯುವಕರು ಭಯಭೀತರಾದರು ಮತ್ತು ಐವರೂ ತಮ್ಮ ಜೀವ ಉಳಿಸಿಕೊಳ್ಳಲು ನದಿಗೆ ಹಾರಿದ್ರು.

ನಂತರ ಚೌಕ್ ಪೊಲೀಸ್ ಠಾಣೆಯ ಪೊಲೀಸರು ಮತ್ತು ಡೈವರ್‌ಗಳು ಸ್ಥಳಕ್ಕೆ ಬಂದರು. ಸುಮಾರು ಎರಡು ಗಂಟೆಗಳ ಪ್ರಯತ್ನದ ನಂತರ, ಡೈವರ್‌ಗಳು ತಿವಾರಿಯ ದೇಹವನ್ನು ಹೊರಕ್ಕೆ ತೆಗೆದರು.ಕೆರುಗಂಜ್ ನಿಂದ ಕಚಾರಿ ರಸ್ತೆಗೆ ಹೋಗುವ ರಸ್ತೆಯನ್ನು ತಡೆದು, ಅವರ ಶವವನ್ನು ಅಲ್ಲಿ ಇರಿಸಿದರು. ಪೊಲೀಸರು ಸಂಯವಹಿಸಿದ್ದರೆ, ಹಾಗೂ ಸ್ನೇಹಿತರು ಆತನನ್ನು ನದಿಗೆ ಹಾರದಂತೆ ತಡೆದಿದ್ದರೆ ಇದೆಲ್ಲಾ ನಡೆಯುತ್ತಲೇ ಇರಲಿಲ್ಲ ಎಂದು ಕುಟುಂಬ ಸದಸ್ಯರು ದೂರಿದ್ದಾರೆ

# ಸ್ನೇಹಿತರಿಂದಲೇ ಬರ್ತ್ ಡೇ ಬಾಯ್ ಹತ್ಯೆ

**ಆನೇಕಲ್;** ಬರ್ತ್‌ಡೇ ಪಾರ್ಟಿ ಬಿಲ್ ಕೊಡುವ ವಿಚಾರಕ್ಕೆ ನಡೆದ ಗಲಾಟೆಯಲ್ಲಿ ಸ್ನೇಹಿತರಿಂದಲೇ ಬರ್ತ್‌ಡೇ ಬಾಯ್ ಕೊಲೆಯಾದ ಘಟನೆ ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲೂಕಿನ ಹಾರಗದ್ದೆ ವಡ್ಡರಪಾಳ್ಯದಲ್ಲಿ ನಡೆದಿದೆ. ಸಂದೀಪ್(23) ಕೊಲೆಯಾದ ಯುವಕ. ಸ್ನೇಹಿತರಾದ ಸಂತೋಷ್ ಮತ್ತು ಸಾಗರ್ ಬಂಧಿತರು. ಜಿಗಣಿ ಠಾಣೆ ಪೊಲೀಸರು ತನಿಖೆ ನಡೆಸಿದ್ದಾರೆ.

**ನಡೆದದ್ದೇನು:** ಅಕ್ಟೋಬರ್ 16ರಂದು ಸಂದೀಪ್ ಬರ್ತ್‌ಡೇ ಇತ್ತು. ಪಾರ್ಟಿಗೆಂದು ಸ್ನೇಹಿತರನ್ನು ಬಾರ್‌ಗೆ ಕರೆದುಕೊಂಡು ಹೋಗಿದ್ದರು. ಪಾರ್ಟಿ ಮುಗಿದ ಬಳಿಕ ಸಂದೀಪ್ ಬಿಲ್ ಕಟ್ಟಿದ್ದರು. ಆದರೆ 2ನೇ ಸಲ ಬಿಲ್ ಕಟ್ಟುವಂತೆ ಸ್ನೇಹಿತರು ಸಂದೀಪ್‌ಗೆ ಒತ್ತಾಯಿಸಿದ್ದಾರೆ. ಹಣ ಇಲ್ಲ ಎಂದಿದ್ದಕ್ಕೆ ಬಾರ್ ಬಳಿ ಸಂತೋಷ್ ಗಲಾಟೆ ಮಾಡಿದ್ದರು. ಇದರಿಂದ ಬೇಸರಗೊಂಡು ಸಂದೀಪ್ ವಾಪಸ್ ಊರಿಗೆ ಬಂದಿದ್ದರು.

ಅಷ್ಟಕ್ಕೆ ಸುಮ್ಮನಾಗದ ಸಂತೋಷ್ ಹಾಗೂ ಸಾಗರ್ ವಾಲಿಬಾಲ್ ಕೋರ್ಟ್ ಬಳಿ ಕರೆಸಿ ಸಂದೀಪ್ ಮೇಲೆ ಹಲ್ಲೆ ಮಾಡಿದ್ದಾರೆ. ಹಲ್ಲೆ ವೇಳೆ ಸಂದೀಪ್ ತಲೆಗೆ ಗಂಭೀರ ಗಾಯವಾಗಿದೆ. ಘಟನೆ ನಡೆದ 3 ದಿನದ ನಂತರ ಸಂದೀಪ್ ಬ್ರೈನ್‌ನಲ್ಲಿ ಬ್ಲಡ್ ಕ್ಲಾಟ್ ಆಗಿದ್ದು , ಅನಂತರ ಪೋಷಕರು ಆತನನ್ನ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದರು. ಆಸ್ಪತ್ರೆಯಲ್ಲಿ ಕೆಲ ದಿನಗಳಿಂದ ಕೋಮಾದಲ್ಲಿ ಇದ್ದ ಸಂದೀಪ್, 2 ದಿನಗಳ ಹಿಂದೆ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ತನ್ನ ತಾಯಿಯ ಚಿನ್ನ ಕದ್ದಿದ್ದನ್ನು ಪ್ರಶ್ನಿಸಿದ್ದಕ್ಕೆ ಸ್ನೇಹಿತನ ಹತ್ಯೆ
ತನ್ನ ತಾಯಿಯ ಚಿನ್ನ ಕದ್ದಿದ್ದನ್ನು ಪ್ರಶ್ನಿಸಿದ್ದಕ್ಕೆ ಚಾಕುವಿನಿಂದ ಇರಿದು ಸ್ನೇಹಿತನ ಹತ್ಯೆ ಮಾಡಿರುವಂತಹ ಘಟನೆ ಬೆಂಗಳೂರಿನ ಕೋಣನಕುಂಟೆಯ ಕೃಷ್ಣಪ್ಪ ಲೇಔಟ್‌ನಲ್ಲಿ ಅಕ್ಟೋಬರ್ 25ರಂದು ಘಟನೆ ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ. ರಾಹುಲ್‌ನನ್ನು, ಪ್ರೀತಮ್ ಕೊಲೆ ಮಾಡಿದ್ದಾರೆ. ಸದ್ಯ ಆರೋಪಿ ಪ್ರೀತಮ್‌ನನ್ನು ಕೋಣನಕುಂಟೆ ಪೊಲೀಸರು ಬಂಧಿಸಿದ್ದಾರೆ.

10 ದಿನಗಳ ಹಿಂದೆ ಪ್ರೀತಮ್ ತಾಯಿಯ ಚಿನ್ನ ಕಳ್ಳತನವಾಗಿತ್ತು. ಆ ಚಿನ್ನವನ್ನು ಕದ್ದಿದ್ದು ಯಾರು ಅನ್ನೋದು ಗೊಂದಲವಾಗಿತ್ತು. ತಾಯಿ ಚಿನ್ನವನ್ನು ರಾಹುಲ್ ಕದ್ದಿದ್ದಾನೆ ಎನ್ನುತ್ತಿರುವ ಪ್ರೀತಮ್, ಆದರೆ ಪ್ರೀತಮ್ ಚಿನ್ನ ಕದ್ದಿದ್ದಾನೆ ರಾಹುಲ್ ಆರೋಪಿಸುತ್ತಿದ್ದ. ಕಳೆದ ಶನಿವಾರ ಪ್ರೀತಮ್ ಬ್ಯಾಗ್‌ನಲ್ಲೇ ರಾಹುಲ್ ಚಿನ್ನ ನೋಡಿದ್ದ. ನಿನ್ನ ಮಗ ಚಿನ್ನ ಕದ್ದಿದ್ದು ಎಂದು ಪ್ರೀತಮ್ ತಾಯಿಗೆ ರಾಹುಲ್ ಹೇಳಿದ್ದ. ಇದರಿಂದ ಕೋಪಗೊಂಡು ಚಾಕುವಿನಿಂದ ಇರಿದು ರಾಹುಲ್ ನ ಕೊಲೆ ಮಾಡಲಾಗಿದೆ.


## ಟೋಲ್ ಸಿಬ್ಬಂದಿ ಮೇಲೆ ಬಿಜೆಪಿ ಮುಖಂಡನ ಪುತ್ರನಿಂದ ಹಲ್ಲೆ




**ವಿಜಯಪುರ:** ಟೋಲ್ ಹಣ ಪಾವತಿಸಲು ಕೇಳಿದ್ದಕ್ಕೆ ಸಿಬ್ಬಂದಿ ಮೇಲೆ ಬಿಜೆಪಿ (BJP) ಮುಖಂಡ ವಿಜೂಗೌಡ ಪಾಟೀಲ್ ಪುತ್ರ ಹಲ್ಲೆ ನಡೆಸಿರುವ ಘಟನೆ ವಿಜಯಪುರ-ಕಲಬುರಗಿ ಟೋಲ್‌ನಲ್ಲಿ ನಡೆದಿದೆ.
ಬಿಜೆಪಿ ಮುಖಂಡ ವಿಜೂಗೌಡ ಪಾಟೀಲ್ ಅವರ ಪುತ್ರ ಸಮರ್ಥಗೌಡ ಪಾಟೀಲ್ ಹಾಗೂ ಸ್ನೇಹಿತರು ವಿಜಯಪುರದಿಂದ ಕಪ್ಪು ಬಣ್ಣದ ಥಾರ್‌ನಲ್ಲಿ ಸಿಂದಗಿ ಕಡೆ ಹೊರಟಿದ್ದರು. ಈ ವೇಳೆ ಜಿಲ್ಲೆಯ ಕನ್ನೊಳ್ಳಿ ಗ್ರಾಮದ ಬಳಿಯಿರುವ ಟೋಲ್‌ನಲ್ಲಿ ಹಣ ಪಾವತಿಸಲು ಕೇಳಿದ್ದಾರೆ.

ಆಗ ಸಮರ್ಥಗೌಡ ನಾನು ವಿಜೂಗೌಡ ಪಾಟೀಲ್ ಪುತ್ರ ಎಂದು ಹೇಳಿದ್ದಾನೆ. ಆಗ ಟೋಲ್ ಸಿಬ್ಬಂದಿ ಯಾವ ವಿಜೂಗೌಡ ಎಂದು ಕೇಳಿದ್ದಾರೆ. ಇದರಿಂದ ಕೋಪಗೊಂಡ ಸಮರ್ಥಗೌಡ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದಾನೆ ಸಮರ್ಥಗೌಡ ಮಾತ್ರವಲ್ಲದೇ ಆತನ ಸ್ನೇಹಿತರು ಕೂಡ ಹಲ್ಲೆ ನಡೆಸಿದ್ದಾರೆ. ಇದರಿಂದ ಟೋಲ್ ಸಿಬ್ಬಂದಿ ಹಣ ತೆಗೆದುಕೊಳ್ಳದೇ ಹಾಗಾಯೇ ಅವರನ್ನು ಬಿಟ್ಟು ಕಳುಹಿಸಿದ್ದಾರೆ. ಹಲ್ಲೆ ನಡೆಸಿದ ದೃಶ್ಯಗಳು ಅಲ್ಲಿಯೇ ಇದ್ದ ಸಿಸಿಟಿವಿಯಲ್ಲಿ ಸೆರೆಯಾಗಿದೆ.

ಸದ್ಯ ಗಾಯಾಳು ಸಂಗಪ್ಪ ಸಿಂದಗಿ ತಾಲೂಕಾಸ್ಪತ್ರೆಗೆ ದಾಖಲಾಗಿದ್ದು , ಟೋಲ್ ಸಿಬ್ಬಂದಿ ದೂರು ದಾಖಲಿಸಲು ಮುಂದಾಗಿದ್ದಾರೆ ಸಮರ್ಥಗೌಡ ಮಾತ್ರವಲ್ಲದೇ ಆತನ ಸ್ನೇಹಿತರು ಕೂಡ ಹಲ್ಲೆ ನಡೆಸಿದ್ದಾರೆ. ಇದರಿಂದ ಟೋಲ್ ಸಿಬ್ಬಂದಿ ಹಣ ತೆಗೆದುಕೊಳ್ಳದೇ ಹಾಗಾಯೇ ಅವರನ್ನು ಬಿಟ್ಟು ಕಳುಹಿಸಿದ್ದಾರೆ. ಹಲ್ಲೆ ನಡೆಸಿದ ದೃಶ್ಯಗಳು ಅಲ್ಲಿಯೇ ಇದ್ದ ಸಿಸಿಟಿವಿಯಲ್ಲಿ ಸೆರೆಯಾಗಿದೆ.



## ನಿಮ್ಮ ಮಗನೇ ಕದ್ದಿರೋದು ಅಂತ ಸತ್ಯ ಹೇಳಿದ ಗೆಳೆಯನ ಕೊಂದ



ಮೃತ ರಾಹುಲ್

**ಬೆಂಗಳೂರು:** ಹೆತ್ತ ತಾಯಿ ಒಡವೆಯನ್ನು ತಾನೇ ಕದ್ದು ಸತ್ಯ ಹೇಳಿದ ಸ್ನೇಹಿತನನ್ನು ಕೊಂದಿರುವ ಘಟನೆ ಬೆಂಗಳೂರಿನ ಕೋಣನಕುಂಟೆಯಲ್ಲಿ ನಡೆದಿದೆ.

ರಾಹುಲ್ ಕೊಲೆಯಾದ ಯುವಕ. ಪ್ರೀತಿ ಕೊಲೆ ಆರೋಪಿ. ಇವರಿಬ್ಬರೂ ಸ್ನೇಹಿತರು. ಒಬ್ಬ ಇಂಜಿನಿಯರಿಂಗ್ ಓದುತ್ತಿದ್ರೆ, ಮತ್ತೊಬ್ಬ ಪಿಯುಸಿ ಡ್ರಾಪ್‌ಔಟ್ ಆಗಿದ್ದ. ಕೋಣನಕುಂಟೆಯ ಕೃಷ್ಣಪ್ಪ ಲೇಔಟ್‌ನಲ್ಲಿ ಪ್ರೀತಂ ಮನೆಯಿದೆ. ಇಲ್ಲಿಗೆ ಪ್ರತಿ ದಿನ ರಾಹುಲ್ ಬರ್ತಿದ್ದ. ಇಬ್ಬರೂ ಜೊತೆಯಲ್ಲಿ ಊಟ ಮಾಡ್ತಿದ್ರು, ಕಾಲ ಕಳೆಯುತ್ತಿದ್ದರು. 25 ರಂದು ಮನೆಯಲ್ಲಿ ಪ್ರೀತಂನ ತಾಯಿಯ ಚಿನ್ನದ ಒಡವೆಗಳು ಕಳ್ಳತನವಾಗಿದೆ. ಮನೆಯಲ್ಲಿ ಎಷ್ಟೇ ಹುಡುಕಿದರೂ ಸಿಕ್ಕಿರಲಿಲ್ಲ.

ಇಬ್ಬರು ಕೂಡ ಒಬ್ಬರ ಮೇಲೆ ಒಬ್ಬರು ಹೇಳಿದ್ದಾರೆ. ಆದರೆ, ಪ್ರೀತಂನ ಬ್ಯಾಗ್‌ನಲ್ಲಿ ಚಿನ್ನದ ಒಡವೆಗಳನ್ನು ನೋಡಿದ ರಾಹುಲ್, ಅವರ ತಾಯಿಯ ಬಳಿ ಹೇಳಿದ್ದಾನೆ. ಇದರಿಂದ ಸಿಟ್ಟಾದ ಪ್ರೀತಂ ನಿನ್ನ ಬಳಿ ಮಾತನಾಡಬೇಕು ಎಂದು ರಾಹುಲ್‌ನ ಕರೆಸಿಕೊಂಡು ಜಗಳ ಮಾಡಿ ಚಾಕುವಿನಿಂದ ಇರಿದಿದ್ದಾನೆ. ಜೊತೆಯಲ್ಲಿ ಬಂದಿದ್ದ ಸ್ನೇಹಿತರು ಗಾಯಾಳುವನ್ನು ಮಣಿಪಾಲ ಆಸ್ಪತ್ರೆಗೆ ಸೇರಿಸಿದ್ದಾರೆ. ಚಿಕಿತ್ಸೆ ಫಲಕಾರಿಯಾಗದೆ ರಾಹುಲ್ ಮೃತಪಟ್ಟಿದ್ದಾನೆ. ಘಟನೆ ಸಂಬಂಧ ಕೋಣನಕುಂಟೆ ಠಾಣೆಯಲ್ಲಿ ದೂರು ದಾಖಲಾಗಿದ್ದು , ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ.

ತನ್ನ ಮನೆಯಲ್ಲಿ ತಾನೇ ಒಡವೆಗಳನ್ನು ಕಳ್ಳತನ ಮಾಡಿದ್ದ ಪ್ರೀತಂ ಸಿಕ್ಕಿ ಹಾಕಿಕೊಂಡಿದ್ದಲ್ಲದೇ, ಈ ವಿಚಾರವನ್ನು ಅಮ್ಮನ ಬಳಿ ಮತ್ತು ಸ್ನೇಹಿತರ ಬಳಿ ಹೇಳಿ ಮರ್ಯಾದೆ ತೆಗೆದಿದ್ದಾನೆ ಎಂದು ಕೋಪಗೊಂಡು

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

# ದೋಣಿ ಮಗುಚಿ ಮಹಿಳೆ ಸಾವು; ಮಕ್ಕಳು ಸೇರಿ 8 ಮಂದಿ ನಾಪತ್ತೆ

dದೋಣಿ ಮಗುಚಿ ಬಿದ್ದು , ಓರ್ವ ಮಹಿಳೆ ಮೃತಪಟ್ಟಿದ್ದಾರೆ. ಎಂಟು ಮಂದಿ ನಾಪತ್ತೆಯಾಗಿದ್ದಾರೆ. ಎಸ್‌ಡಿಆರ್‌ಎಫ್ ತಂಡ ಸ್ಥಳಕ್ಕೆ ಧಾವಿಸಿದ್ದು , ಪೊಲೀಸರು ಕಾಣೆಯಾದ ವ್ಯಕ್ತಿಗಳನ್ನು ಪತ್ತೆಹಚ್ಚಲು ಸ್ಥಳೀಯ ಡೈವರ್‌ಗಳನ್ನು ಬಳಸಿಕೊಂಡಿದ್ದಾರೆ. ಮಹಿಳೆಯೊಬ್ಬರ ಮೃತದೇಹ ಪತ್ತೆಯಾಗಿದೆ. ಉಳಿದವರಿಗಾಗಿ ಹುಡುಕಾಟ ನಡೆಯುತ್ತಿದೆ 22 ಜನರನ್ನು ಹೊತ್ತು ಭರತಪುರಕ್ಕೆ ದೋಣಿ ಪ್ರಯಾಣಿಸುತ್ತಿದ್ದಾಗ ಅವಘಡ ಸಂಭವಿಸಿದೆ. ನದಿಯ ಬಲವಾದ ಪ್ರವಾಹದಿಂದಾಗಿ ದೋಣಿ ಪಲ್ಟಿಯಾಗಿದೆ. ಘಟನೆಯಲ್ಲಿ 60 ವರ್ಷದ ಮಹಿಳೆಯೊಬ್ಬರು ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದು , ಐದು ಮಕ್ಕಳು ಸೇರಿದಂತೆ ಎಂಟು ಜನರು ನಾಪತ್ತೆಯಾಗಿದ್ದಾರೆ. ಬಾಕಿ ಜನರು ಈಜಿ ದಡ ಸೇರಿದ್ದಾರೆ.
ಭರ್ತಾಪುರ ಗ್ರಾಮದ ಪುರುಷರು, ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ 22 ನಿವಾಸಿಗಳು ನದಿ ಪಕ್ಕದ ಲಖಿಂಪುರ ಖೇರಿ ಜಿಲ್ಲೆಯ ಮಾರುಕಟ್ಟೆಗೆ ಹೋಗಿದ್ದರು. ಈ ಗ್ರಾಮವು ಕತರ್ನಿಯಾ ಘಾಟ್ ವನ್ಯಜೀವಿ ಅಭಯಾರಣ್ಯದಲ್ಲಿ ನದಿಯ ಒಂದು ಬದಿಯಲ್ಲಿರುವ ದ್ವೀಪದಂತಿದೆ. ದೋಣಿಯಲ್ಲಿ ವಾಪಸ್ ಬರುವಾಗ ಘಟನೆ ನಡೆದಿದೆ

# ಶಾಲೆ ಆವರಣದಲ್ಲಿದ್ದ ಸಂಪ್‌ನಲ್ಲಿ ಬಿದ್ದು 3ನೇ ತರಗತಿ ವಿದ್ಯಾರ್ಥಿ ಸಾವು



**ಕೋಲಾರ:**ಶಾಲೆ ಆವರಣದಲ್ಲಿದ್ದ ಸಂಪ್‌ನಲ್ಲಿ (Sump) ಬಿದ್ದು 3ನೇ ತರಗತಿ ವಿದ್ಯಾರ್ಥಿ (Student) ಸಾವನ್ನಪ್ಪಿರುವ ಘಟನೆ ಕೋಲಾರದಲ್ಲಿ (Kolar) ನಡೆದಿದೆ.

ಕೋಲಾರ ಜಿಲ್ಲೆಯ ಮಾಲೂರು ತಾಲೂಕು ಕಡದನಹಳ್ಳಿ ಗ್ರಾಮದಲ್ಲಿ ಈ ಘಟನೆ ನಡೆದಿದೆ. ನರೇಂದ್ರ (9) ಮೃತ ವಿದ್ಯಾರ್ಥಿ. ಕಡದನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 3ನೇ ತರಗತಿ ಓದುತ್ತಿದ್ದ ನರೇಂದ್ರ ಇಂದು ಬೆಳಗ್ಗೆ ಶಾಲೆಗೆಂದು ಬಂದು ಬಳಿಕ ನಾಪತ್ತೆಯಾಗಿದ್ದ

ಗ್ರಾಮದಲ್ಲೆಲ್ಲಾ ಹುಡುಕಾಟ ನಡೆಸಿದ ಪೋಷಕರು ಆತಂಕಗೊಂಡು ಎಲ್ಲೆಡೆ ವಿಚಾರಣೆ ನಡೆಸಿದರು. ಬಳಿಕ ಶಾಲೆ ಆವರಣದಲ್ಲಿರುವ ಸಂಪ್‌ನಲ್ಲಿ ವಿದ್ಯಾರ್ಥಿ ನರೇಂದ್ರ, ಶವ ಪತ್ತೆಯಾಗಿದೆ. ಮಾಸ್ತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದ್ದು , ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡು ತನಿಖೆ ಕೈಗೊಂಡಿದ್ದಾರೆ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಮಗಳಂತೆ ಸಾಕಿದ ಮನೆಕೆಲಸದಾಕೆಯಿಂದ ಕಳ್ಳತನ: 5 ಕೋಟಿ ಮೌಲ್ಯದ ಆಸ್ತಿ, ಚಿನ್ನ ಕಳವು



**ಬೆಂಗಳೂರು**: ಮಗಳಂತೆ ಸಾಕಿದ ದತ್ತು ತಾಯಿಯ ಐಶ್ವರ್ಯವನ್ನೇ ಲೂಟಿ ಮಾಡಲು ಯತ್ನಿಸಿದ ಘಟನೆ ಬೆಂಗಳೂರಿನ ಜೆಪಿ ನಗರದಲ್ಲಿ ಬೆಳಕಿಗೆ ಬಂದಿದೆ. 15 ವರ್ಷಗಳ ಕಾಲ ಮನೆಮಾಲೀಕರಿಂದ ಮಗಳಂತೆ ಸಲಹಲ್ಪಟ್ಟ ಮನೆಗೆಲಸದಾಕೆ ಮಂಗಳ, ಆನ್‌ಲೈನ್ ಬೆಟ್ಟಿಂಗ್ ಚಟದಲ್ಲಿ ಬಿದ್ದು, ಮನೆಯ ಚಿನ್ನ ಮತ್ತು ಬೆಳ್ಳಿ ಕಳವು ಮಾಡಿದ ಆರೋಪದಲ್ಲಿ ಪೊಲೀಸರಿಂದ ಬಂಧಿತಳಾಗಿದ್ದಾಳೆ.

ಮನೆಮಾಲೀಕಿ ಆಶಾ ಜಾಧವ್ (58) ಅವರಿಗೆ ಮಕ್ಕಳಿರಲಿಲ್ಲ. ಪತಿ ಮತ್ತು ತಾಯಿಯನ್ನು ಕಳೆದುಕೊಂಡಿದ್ದ ಅವರು, 15 ವರ್ಷಗಳ ಹಿಂದೆ ಮನೆಗೆಲಸದಾಕೆಯಾಗಿ ಮಂಗಳಳನ್ನು ನೇಮಿಸಿಕೊಂಡರು.

ಕಾಲಕ್ರಮೇಣ, ಮಂಗಳಳನ್ನು ಅವರು ತಮ್ಮ ಮಗಳಂತೆಯೇ ಭಾವಿಸಿದರು. ಆಶಾ ಅವರು ತಮ್ಮ 5 ಕೋಟಿ ರೂಪಾಯಿ ಮೌಲ್ಯದ ಮನೆಯನ್ನು ಸಹ ಮಂಗಳ ಹೆಸರಿಗೆ ವಿಲ್ ಮಾಡಿದ್ದರು. ಮಂಗಳಳು 40 ಲಕ್ಷ ರೂಪಾಯಿಗಳ ಸಾಲದಲ್ಲಿ ಸಿಲುಕಿದಾಗ, ಆಶಾ ಅವರು ಆ ಸಾಲವನ್ನು ತೀರಿಸಿಕೊಟ್ಟಿದ್ದರು.

ಆದರೆ, ಮಂಗಳಳ ಆನ್‌ಲೈನ್ ಬೆಟ್ಟಿಂಗ್ ಚಟವು ಕಡಿತಗೊಳ್ಳಲಿಲ್ಲ. ಹಣದ ಅಗತ್ಯವು ಅವಳನ್ನು ಕಳವಿನ ಪಥಕ್ಕೆ ಇಳಿಸಿತು. ಮನೆಯ ಬೀರೋದಲ್ಲಿ ಇರಿಸಿದ್ದ 450 ಗ್ರಾಂ ಚಿನ್ನ ಮತ್ತು 3 ಕೆಜಿ ಬೆಳ್ಳಿ ಬಂಗಾರವನ್ನು ಅವಳು ಕದ್ದಳು. ಮೂಲ ಕೀಲಿಯನ್ನು ಬಳಸಿ ಬೀರೋ ತೆರೆದು, ಚಿನ್ನವನ್ನು ತೆಗೆದುಹಾಕಿದ ಅವಳು, ನಂತರ ಕೀಲಿಯನ್ನು ನಿರ್ಜನ ಪ್ರದೇಶದಲ್ಲಿ ಎಸೆದುಬಿಟ್ಟಳು. ದೀಪಾವಳಿ ಸಮಯದಲ್ಲಿ ಚಿನ್ನ ತೆಗೆಯಲು ಬೀರೋ ತೆರೆದಾಗ ಮಾತ್ರ ಈ ಕಳವು ಬೆಳಕಿಗೆ ಬಂದಿತು.

ಕಳವು ಯಾರೋ ಮಾಡಿರಬಹುದೆಂದು ಆಶಾ ಅವರು ಮೊದಲು ದೂರು ನೀಡಿದರು. ಪೊಲೀಸರು ಮಂಗಳಳ ಮೇಲೆ ಅನುಮಾನಿಸಿದಾಗ even, ಆಶಾ ಅವರು ಅದನ್ನು ತೀವ್ರವಾಗಿ ನಿರಾಕರಿಸಿದರು. ಆದರೆ, ಪೊಲೀಸರು ಮಂಗಳಳ ಸಿಡಿಆರ್ ಪರಿಶೀಲನೆ ನಡೆಸಿದಾಗ, ಅವಳು ಚಿನ್ನವನ್ನು ಅಡಮಾನ ಇಟ್ಟಿದ್ದ ಸಂಗತಿ ಬೆಳಕಿಗೆ ಬಂದಿತು. ವಿಚಾರಣೆಯಲ್ಲಿ ಮಂಗಳ ತನ್ನ ತಪ್ಪನ್ನು ಒಪ್ಪಿಕೊಂಡಳು. ಆಶಾ ಅವರು ಮಂಗಳಳನ್ನು ಬಿಡಿಸಿಕೊಳ್ಳಲು ಯತ್ನಿಸಿದರೂ, ಪೊಲೀಸರು ಅವಳನ್ನು ಬಂಧಿಸಿದರು. ಕಳವು ಮಾಡಿದ 450 ಗ್ರಾಂ ಚಿನ್ನ ಮತ್ತು 3 ಕೆಜಿ ಬೆಳ್ಳಿಯನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಈ ಘಟನೆಯ ನಂತರ, ಆಶಾ ಜಾಧವ್ ಅವರು ಮಂಗಳ ಹೆಸರಿಗೆ ಮಾಡಿದ್ದ ಮನೆಯ ವಿಲ್ ಅನ್ನು ವಾಪಸ್ ಪಡೆದುಕೊಂಡಿದ್ದಾರೆ. ಪ್ರತಿ ಹುಟ್ಟುಹಬ್ಬವನ್ನು ವಿಶೇಷವಾಗಿ ಆಚರಿಸುತ್ತಿದ್ದ ಮತ್ತು ವಿದೇಶಗಳಿಗೆ ಕರೆದುಕೊಂಡು ಹೋಗುತ್ತಿದ್ದ ಆಶಾ ಅವರು, ಮಂಗಳಳ ಮದುವೆಯನ್ನು ಕೂಡ ಏರ್ಪಾಡು ಮಾಡುತ್ತಿದ್ದರು. ಆದರೆ, ಆನ್‌ಲೈನ್ ಬೆಟ್ಟಿಂಗ್ ಹುಚ್ಚು ಎಲ್ಲವನ್ನೂ ನಾಶಮಾಡಿತು. ಸದ್ಯ ಮಂಗಳ ಪರಪ್ಪನ ಅಗ್ರಹಾರ ಜೈಲುಶಿಕ್ಷೆ ಅನುಭವಿಸುತ್ತಿದ್ದಾಳೆ. ಈ ಘಟನೆ ವಿಶ್ವಾಸ ಮತ್ತು ದುರಾಸೆಯ ಕಹಿ ಸತ್ಯವನ್ನು ಮತ್ತೊಮ್ಮೆ ಬಯಲಿಗೆಳೆದಿದೆ.

## ನೇರಳೆ ಮಾರ್ಗ ಮಧ್ಯೆಯೇ ನಿಂತ ನಮ್ಮ ಮೆಟ್ರೋ



**ಬೆಂಗಳೂರು:** ನಮ್ಮ ಮೆಟ್ರೋದಲ್ಲಿ ತಾಂತ್ರಿಕ ಸಮಸ್ಯೆ ಉಂಟಾಗಿ ನೇರಳೆ ಮಾರ್ಗದಲ್ಲಿ ಸಂಚಾರ ವ್ಯತ್ಯಯ ಉಂಟಾಗಿದೆ. ಸುಮಾರು ಒಂದು ಗಂಟೆಗಳ ಕಾಲ ರೈಲುಗಳ ಸಂಚಾರದಲ್ಲಿ ವ್ಯತ್ಯಯವಾಗಿದೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ. ಚಲಿಸುತ್ತಿದ್ದ ಮೆಟ್ರೋ ರೈಲಿನ ಡೋರ್ ಓಪನ್ ಆಗಿದ್ದು, ಮತ್ತೆ ಕ್ಲೋಸ್ ಆಗಿಲ್ಲ ಎಂದು ತಿಳಿದುಬಂದಿದೆ

ಪೀಕ್ ಹವರ್‌ನಲ್ಲಿ ಮೆಟ್ರೋ ಕೈ ಕೊಟ್ಟಿದ್ದರಿಂದ ಪ್ರಯಾಣಿಕರು ವಿಜಯನಗರ ಮೆಟ್ರೋ ನಿಲ್ದಾಣದಲ್ಲಿ ಪರದಾಡಿದ್ದಾರೆ. ಫ್ಲಾಟ್ ಫಾರಂನಲ್ಲಿ ಪ್ರಯಾಣಿಕರಿಂದ ತುಂಬಿ ತುಳುಕಿದ್ದು, ಕೆಲಸಕ್ಕೆ ಹೋಗಲಾಗದೇ ಪರದಾಡಿದ್ದಾರೆ.

ಮೆಟ್ರೋ ನಿಲ್ದಾಣದಲ್ಲಿ ಪ್ರಯಾಣಿಕರ ದಟ್ಟಣೆ ಹೆಚ್ಚಾಗಿದ್ದು, ಹೊರ ಬರಲು ಹರಸಾಹಸಪಟ್ಟಿದ್ದಾರೆ. ನೇರಳೆ ಮಾರ್ಗದ ಚಲ್ಲಘಟ್ಟದಿಂದ ವೈಟ್ ಫೀಲ್ಡ್ ಕಡೆ ಸಂಚರಿಸುತ್ತಿದ್ದ ರೈಲು, ಟ್ರ್ಯಾಕ್‌ನ ಅರ್ಧ ಮಾರ್ಗದಲ್ಲಿ ನಿಂತಿದೆ. ಯಾವ ನಿಲ್ದಾಣದ ಬಳಿ ಮೆಟ್ರೋ ರೈಲು ನಿಂತಿದೆ ಎಂಬ ಮಾಹಿತಿಯನ್ನು ಅಧಿಕಾರಿಗಳು ನೀಡಿಲ್ಲ. ಸ್ಥಗಿತಗೊಂಡ ಮೆಟ್ರೋ ಸೇವೆ ಪುನಾರಾರಂಭಗೊಂಡಿದ್ದು, ಪ್ರಯಾಣಿಕರು ನಿಟ್ಟುಸಿರುಬಿಟ್ಟಿದ್ದಾರೆ.

## ಅಲಂಕಾರಿಕ ಗಿಡ ಅಂತ ಮನೆ ಮುಂದೆಯೇ ಗಾಂಜಾ ಬೆಳೆದ ಭೂಪ



**ಮಂಡ್ಯ**: ಅಲಂಕಾರಿಕ ಗಿಡ ಎಂದು ಜನರನ್ನು ನಂಬಿಸಿ ಮನೆಯ ಮುಂದೆಯೇ ಐದು ಗಾಂಜಾ ಗಿಡ ಬೆಳೆದಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿರುವ ಘಟನೆ ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಶ್ರೀನಿವಾಸ ಅಗ್ರಹಾರದಲ್ಲಿ ಜರುಗಿದೆ.

ಶ್ರೀನಿವಾಸ ಅಗ್ರಹಾರದ ಸುರೇಶ್ ಎಂಬಾತ ತನ್ನ ಮನೆಯ ಮುಂದೆ ಐದು ಗಾಂಜಾ ಗಿಡಗಳನ್ನು ಬೆಳೆದಿದ್ದ. ಸ್ಥಳೀಯರು ಇದು ಯಾವ ಗಿಡ ಎಂದು ಕೇಳಿದಾಗ ಸುರೇಶ್ ಇದು ಅಲಂಕಾರಿಕ ಗಿಡ ಎಂದು ಹೇಳುತ್ತಿದ್ದ. ಗಾಂಜಾ ಗಿಡ ಹೂ ಬಿಡುವ ಹಂತಕ್ಕೆ ಬಂದ ವೇಳೆ ಗಿಡಗಳಿಗೆ ಸೀರೆ ಸುತ್ತಿ ಮರೆ ಮಾಡಿದ್ದಾನೆ. ಈ ವಿಚಾರವನ್ನು ಸ್ಥಳೀಯರೊಬ್ಬರು ಶ್ರೀರಂಗಪಟ್ಟಣ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಮಾಹಿತಿ ಆಧರಿಸಿ ದಾಳಿ ನಡೆಸಿದ ಪೊಲೀಸರು ಪರಿಶೀಲನೆ ಮಾಡಿದ ವೇಳೆ ಅದು ಅಲಂಕಾರಿಕ ಗಿಡ ಅಲ್ಲ ಗಾಂಜಾ ಗಿಡ ಎಂದು ತಿಳಿದು ಬಂದಿದೆ. ಸದ್ಯ 9 ಕೆಜಿಯ 3 ಲಕ್ಷ ಮೌಲ್ಯದ ಗಾಂಜಾ ಗಿಡವನ್ನು ಪೊಲೀಸರು ಜಪ್ತಿ ಮಾಡಿ ಸುರೇಶ್‌ನನ್ನು ಬಂಧಿಸಿದ್ದು, ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ.

## ಉಡುಪಿಯಲ್ಲಿ ಬೃಹತ್ ಗೀತೋತ್ಸವ: ಪ್ರಧಾನಿ ಮೋದಿಯೊಂದಿಗೆ ಲಕ್ಷ ಭಕ್ತರ ಸಮಾಗಮ



**ಉಡುಪಿ**: ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನವೆಂಬರ್ 28, 2025ರಂದು ಉಡುಪಿಯ ಶ್ರೀಕೃಷ್ಣ ಮಠಕ್ಕೆ ಭೇಟಿ ನೀಡಲಿದ್ದಾರೆ. ಬಿಹಾರದ ವಿಧಾನಸಭಾ ಚುನಾವಣೆಯ ಪ್ರಚಾರದಲ್ಲಿ ತೊಡಗಿರುವ ಮೋದಿ, ಈ ದಿನ ಉಡುಪಿಯಲ್ಲಿ ನಡೆಯಲಿರುವ ಲಕ್ಷ ಕಂಠ ಗೀತಾ ಪಾರಾಯಣ-ಬೃಹತ್ ಗೀತೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಭೇಟಿಯನ್ನು ಪ್ರಧಾನಮಂತ್ರಿಯ ಕಚೇರಿಯು ದೃಢಪಡಿಸಿದ್ದು, ಕಾರ್ಯಕ್ರಮಕ್ಕೆ ಸಂಬಂಧಿಸಿದ ಎಲ್ಲಾ ಸಿದ್ಧತೆಗಳು ಈಗಾಗಲೇ ಆರಂಭವಾಗಿವೆ.

ನವೆಂಬರ್ 28ರಂದು ಮಧ್ಯಾಹ್ನ 12 ಗಂಟೆಗೆ ಶ್ರೀಕೃಷ್ಣ ಮಠಕ್ಕೆ ಆಗಮಿಸಲಿರುವ ಪ್ರಧಾನಿ ಮೋದಿ, ಮೊದಲಿಗೆ ಮಠದಲ್ಲಿ ಪ್ರಸಾದ ಸ್ವೀಕರಿಸಲಿದ್ದಾರೆ. ಬಳಿಕ, ಪರ್ಯಾಯ ಪುತ್ತಿಗೆ ಶ್ರೀ ಸುಗುಣೇಂದ್ರ ತೀರ್ಥ ಶ್ರೀಪಾದರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಈ ಸಂದರ್ಭದಲ್ಲಿ, ಶ್ರೀಕೃಷ್ಣ ಮಠದಲ್ಲಿ ಆಯೋಜಿಸಲಾಗಿರುವ ಲಕ್ಷ ಕಂಠ ಗೀತಾ ಪಾರಾಯಣ-ಬೃಹತ್ ಗೀತೋತ್ಸವದಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಸಾವಿರಾರು ಭಕ್ತರು, ಗಣ್ಯರು, ಸಂತರು ಮತ್ತು ಧಾರ್ಮಿಕ ಮುಖಂಡರು ಭಾಗವಹಿಸುವ ನಿರೀಕ್ಷೆಯಿದೆ. ಈ ಐತಿಹಾಸಿಕ ಕಾರ್ಯಕ್ರಮವು ಉಡುಪಿಯ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲಿದೆ.

ನವೆಂಬರ್ 8ರಿಂದ 30ರವರೆಗೆ ಶ್ರೀಕೃಷ್ಣ ಮಠ ಮತ್ತು ಪುತ್ತಿಗೆ ಮಠದ ಆಶ್ರಯದಲ್ಲಿ ಲಕ್ಷ ಕಂಠ ಗೀತಾ ಪಾರಾಯಣ-ಬೃಹತ್ ಗೀತೋತ್ಸವ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮವು ಭಗವದ್ಗೀತೆಯ ಸಂದೇಶವನ್ನು ಜನಸಾಮಾನ್ಯರಿಗೆ ತಲುಪಿಸುವ ಗುರಿಯನ್ನು ಹೊಂದಿದೆ. ಕಾರ್ಯಕ್ರಮದ ಕೊನೆಯ ದಿನವಾದ ನವೆಂಬರ್ 30ರಂದು 50,000ಕ್ಕೂ ಹೆಚ್ಚು ಭಕ್ತರು ಒಟ್ಟುಗೂಡಲಿದ್ದಾರೆ ಎಂದು ಅಂದಾಜಿಸಲಾಗಿದೆ. ಈ ದಿನ ದೇಶದ ವಿವಿಧ ಭಾಗಗಳಿಂದ ಸಂತರು, ಧಾರ್ಮಿಕ ಮುಖಂಡರು ಮತ್ತು ಗಣ್ಯರು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮವು ಭಾರತದ ಆಧ್ಯಾತ್ಮಿಕ ಪರಂಪರೆಯನ್ನು ಎತ್ತಿಹಿಡಿಯುವ ಜೊತೆಗೆ, ಭಗವದ್ಗೀತೆಯ ತತ್ವಗಳನ್ನು ಜನರಿಗೆ ಮನವರಿಕೆ ಮಾಡಿಕೊಡುವ ಗುರಿಯನ್ನು ಹೊಂದಿದೆ.

ಪ್ರಧಾನಿ ಮೋದಿಯವರ ಈ ಭೇಟಿಯು ಉಡುಪಿಯ ಶ್ರೀಕೃಷ್ಣ ಮಠದ ಆಧ್ಯಾತ್ಮಿಕ ಮಹತ್ವವನ್ನು ರಾಷ್ಟ್ರೀಯ ಮಟ್ಟದಲ್ಲಿ ಮತ್ತಷ್ಟು ಪ್ರಕಾಶಮಾನಗೊಳಿಸಲಿದೆ. ಶ್ರೀಕೃಷ್ಣ ಮಠವು ದೇಶದ ಪ್ರಮುಖ ಧಾರ್ಮಿಕ ಕೇಂದ್ರಗಳಲ್ಲಿ ಒಂದಾಗಿದ್ದು, ಇದರ ಇತಿಹಾಸ ಮತ್ತು ಸಾಂಸ್ಕೃತಿಕ ಪರಂಪರೆಯು ಜಗತ್ತಿನಾದ್ಯಂತ ಗಮನ ಸೆಳೆದಿದೆ. ಪ್ರಧಾನಿಯವರ ಭೇಟಿಯಿಂದ ಈ ಕಾರ್ಯಕ್ರಮಕ್ಕೆ ರಾಷ್ಟ್ರೀಯ ಮನ್ನಣೆ ದೊರೆಯಲಿದ್ದು, ಉಡುಪಿಯ ಆಧ್ಯಾತ್ಮಿಕ ಪ್ರಾಮುಖ್ಯತೆಯನ್ನು ಜಗತ್ತಿಗೆ ತಿಳಿಸುವ ಅವಕಾಶವೂ ಸಿಗಲಿದೆ.

ಈ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಶ್ರೀಕೃಷ್ಣ ಮಠದಲ್ಲಿ ಭದ್ರತೆ, ಆಸನ ವ್ಯವಸ್ಥೆ, ಸಾರಿಗೆ ಮತ್ತು ಇತರ ಸೌಲಭ್ಯಗಳಿಗೆ ಸಂಬಂಧಿಸಿದ ಎಲ್ಲಾ ತಯಾರಿಗಳನ್ನು ಈಗಾಗಲೇ ಆರಂಭಿಸಲಾಗಿದೆ. ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಸರ್ಕಾರ ಮತ್ತು ಮಠದ ಆಡಳಿತವು ಸೂಕ್ತ ವ್ಯವಸ್ಥೆಗಳನ್ನು ಮಾಡುತ್ತಿದೆ. ಈ ಕಾರ್ಯಕ್ರಮವು ಉಡುಪಿಯ ಧಾರ್ಮಿಕ ಮತ್ತು ಸಾಂಸ್ಕೃತಿಕ ಚೈತನ್ಯವನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲಿದೆ ಎಂಬ ನಿರೀಕ್ಷೆಯಿದೆ.

## ನಟ ಧ್ರುವ ಸರ್ಜಾ ವಿರುದ್ಧ ದೂರು, ಎಫ್‌ಐಆರ್ ದಾಖಲಿಸುವಂತೆ ಒತ್ತಾಯ




ನಟ ಧ್ರುವ ಸರ್ಜಾ ವಿರುದ್ಧ ಬೆಂಗಳೂರಿನ ಬನಶಂಕರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಧ್ರುವ ಸರ್ಜಾ ವಿರುದ್ಧ ಮಾತ್ರವೇ ಅಲ್ಲದೆ ಧ್ರುವ ಸರ್ಜಾ ಮ್ಯಾನೇಜರ್, ಅವರ ಕಾರು ಚಾಲಕ ಹಾಗೂ ಅಭಿಮಾನಿಗಳ ವಿರುದ್ಧವೂ ದೂರು ದಾಖಲಾಗಿದೆ. ಧ್ರುವ ಸರ್ಜಾ ವಿರುದ್ಧ ಅವರ ನೆರೆಮನೆಯವರೇ ದೂರು ದಾಖಲು ಮಾಡಿದ್ದಾರೆ. ಅಲ್ಲದೆ ಧ್ರುವ ಸರ್ಜಾ ಹಾಗೂ ಅವರ ಮ್ಯಾನೇಜರ್, ಚಾಲಕನ ಮೇಲೆ ಎಫ್‌ಐಆರ್ ದಾಖಲು ಮಾಡುವಂತೆ ದೂರುದಾರರು ಒತ್ತಾಯಿಸಿದ್ದಾರೆ.

ನಟ ಧ್ರುವ ಸರ್ಜಾ (Dhruva Sarja) ವಿರುದ್ಧ ಬೆಂಗಳೂರಿನ ಬನಶಂಕರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಧ್ರುವ ಸರ್ಜಾ ವಿರುದ್ಧ ಮಾತ್ರವೇ ಅಲ್ಲದೆ ಧ್ರುವ ಸರ್ಜಾ ಮ್ಯಾನೇಜರ್, ಅವರ ಕಾರು ಚಾಲಕ ಹಾಗೂ ಅಭಿಮಾನಿಗಳ ವಿರುದ್ಧವೂ ದೂರು ದಾಖಲಾಗಿದೆ. ಧ್ರುವ ಸರ್ಜಾ ವಿರುದ್ಧ ಅವರ ನೆರೆಮನೆಯವರೇ ದೂರು ದಾಖಲು ಮಾಡಿದ್ದಾರೆ. ಅಲ್ಲದೆ ಧ್ರುವ ಸರ್ಜಾ ಹಾಗೂ ಅವರ ಮ್ಯಾನೇಜರ್, ಚಾಲಕನ ಮೇಲೆ ಎಫ್‌ಐಆರ್ ದಾಖಲು ಮಾಡುವಂತೆ ದೂರುದಾರರು ಒತ್ತಾಯಿಸಿದ್ದಾರೆ.

ಅಭಿಮಾನಿಗಳು ಮನೆಯ ಮುಂದೆ ಸಿಗರೇಟು ಸೇದುತ್ತಾರೆ, ಗುಟ್ಕಾ ಉಗಿಯುತ್ತಾರೆ, ಮನೆಯ ಗೋಡೆಗಳ ಮೇಲೆಯೂ ಉಗಿದಿದ್ದಾರೆ, ಗಲಾಟೆ ಮಾಡುತ್ತಾರೆ. ಈ ಬಗ್ಗೆ ನಟನ ಮ್ಯಾನೇಜರ್, ಚಾಲಕನ ಬಳಿ ಹೇಳಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಧ್ರುವ ಸರ್ಜಾ ಅವರ ಅಭಿಮಾನಿಗಳ ಉಪಟಳದಿಂದ ಸಮಸ್ಯೆ ಆಗಿದೆ ಎಂದು ಮನೋಜ್ ಹೇಳಿದ್ದಾರೆ.

ಮನೋಜ್ ನೀಡಿರುವ ದೂರು ಆಧರಿಸಿ ಪೊಲೀಸರು ಎನ್ ಸಿಆರ್ ದಾಖಲಿಸಿದ್ದಾರೆ. ಆದರೆ ಧ್ರುವ ಸರ್ಜಾ, ಅವರ ಮ್ಯಾನೇಜರ್ ಮತ್ತು ಚಾಲಕರ ಮೇಲೆ ಎಫ್‌ಐಆರ್ ದಾಖಲು ಮಾಡಬೇಕು ಎಂದು ದೂರುದಾರರು ಪೊಲೀಸರನ್ನು ಒತ್ತಾಯಿಸಿದ್ದಾರೆ. ಆದರೆ ಎಫ್‌ಐಆರ್ ದಾಖಲು ಮಾಡಲಾಗಿಲ್ಲ. ಬದಲಿಗೆ ಎನ್‌ಸಿಆರ್ ಅನ್ನಷ್ಟೆ ದಾಖಲು ಮಾಡಲಾಗಿದೆ.

## ಅಪಘಾತವಾದ್ರೆ, ಇನ್ಮುಂದ್ರೆ?ಹೊಸ ಟೆಕ್ನಾಲಜಿ ಪರಿಚಯಿಸಿದ BTP



**ಬೆಂಗಳೂರು**: ರಾಜಧಾನಿ ಬೆಂಗಳೂರಲ್ಲಿ ವಾಹನಗಳ ದಟ್ಟಣೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಇದರ ಪರಿಣಾಮವಾಗಿ ಅಪಘಾತಗಳ ಸಂಖ್ಯೆಯೂ ಡಬಲ್ ಆಗಿದ್ದು, ಸಣ್ಣಪುಟ್ಟ ಅಪಘಾತಗಳು ದಿನನಿತ್ಯ ಮಾಮೂಲು ಎಂಬಂತಾಗಿವೆ. ಈ ಹಿನ್ನಲೆ ಸೇವೆಯನ್ನು ತ್ವರಿತವಾಗಿ ಒದಗಿಸುವ ಉದ್ದೇಶದಿಂದ ಪೊಲೀಸ್ ಇಲಾಖೆ ಮಹತ್ವದ ಬದಲಾವಣೆ ತಂದಿದ್ದು, ಇ-ಆ್ಯಕ್ಸಿಡೆಂಟ್ ರಿಪೋರ್ಟ್ ದಾಖಲಿಸಲು ಸಾರ್ವಜನಿಕರಿಗೆ ಅವಕಾಶ ಒದಗಿಸಿದೆ.

ಸಣ್ಣಪುಟ್ಟ ಅಪಘಾತಗಳು ನಡೆದಾಗಲೂ ಪೊಲೀಸ್ ಠಾಣೆಗೆ ತೆರಳಿ ಆ ಬಗ್ಗೆ ದೂರು ನೀಡುವುದು ಬಹಳ ತ್ರಾಸದಾಯಕ ಮತ್ತು ಸಮಯ ವ್ಯರ್ಥಕ್ಕೆ ಕಾರಣವಾಗಲಿದೆ. ಹೀಗಾಗಿ BTP ASTraM ಆ್ಯಪ್‌ನಲ್ಲಿ ಇ-ಆ್ಯಕ್ಸಿಡೆಂಟ್ ರಿಪೋರ್ಟ್ ಎಂಬ ಆಯ್ಕೆಯನ್ನು ಪೊಲೀಸ್ ಇಲಾಖೆ ಹೊಸದಾಗಿ ಪರಿಚಯಿಸಿದೆ. ಈ ಮೂಲಕ ಅಪಘಾತ ನಡೆದ ಜಾಗದಿಂದಲೇ ನೀವು ಆ ಬಗ್ಗೆ ದೂರು ದಾಖಲಿಸಬಹುದಾಗಿದ್ದು, ನಿಮ್ಮ ಕಂಪ್ಲೇಂಟ್ ಸ್ವೀಕರಿಸಿದ ಬಗ್ಗೆ ದಾಖಲೆಯೂ ಕೂಡಲೇ ಸಿಗಲಿದೆ.

**ಇ-ಆ್ಯಕ್ಸಿಡೆಂಟ್ ರಿಪೋರ್ಟ್ ದಾಖಲಿಸೋದು ಹೇಗೆ?**

**ಮೊದಲು BTP ASTraM ಆ್ಯಪನ್ನು ನಿಮ್ಮ ಮೊಬೈಲ್‌ನಲ್ಲಿ ಡೌನ್ ಲೋಡ್ ಮಾಡಿಕೊಳ್ಳಿ**

**ಆ್ಯಪ್‌ನಲ್ಲಿ ನೀಡಲಾಗಿರುವ ಇ-ಆ್ಯಕ್ಸಿಡೆಂಟ್ ರಿಪೋರ್ಟ್ ಆಯ್ಕೆ ಮೇಲೆ ಕ್ಲಿಕ್ ಮಾಡಿ**

**ಅಪಘಾತದ ಫೋಟೋ ಜೊತೆಗೆ ಅಗತ್ಯ ಮಾಹಿತಿಯನ್ನು ದಾಖಲಿಸಿ**

**ನಿಮ್ಮ ದೂರು ಸ್ವೀಕೃತವಾದ ಬಗ್ಗೆ ದಾಖಲೆಯನ್ನು ಕೂಡಲೇ ಪಡೆಯಿರಿ**

ಕೇವಲ ನಮ್ಮ ವಾಹನಗಳು ಅಪಘಾತವಾದಾಗ ಮಾತ್ರವಲ್ಲದೆ ಇತರ ಅಪಘಾತಗಳಿಗೆ ನಾವು ಸಾಕ್ಷಿಯಾದಾಗಲೂ ಆ ಬಗ್ಗೆ ದೂರು ದಾಖಲಿಸಬಹುದಾಗಿದೆ. ಎಂಬ ಎರಡು ಆಯ್ಕೆಯನ್ನು ಇಲ್ಲಿ ನೀಡಲಾಗಿದೆ. ದೂರು ದಾಖಲಿಸುವವರು ಅಪಘಾತವಾದ ವಾಹನಗಳ ರಿಜಿಸ್ಟ್ರೇಶನ್ ನಂಬರ್ ಜೊತೆಗೆ ಅಪಘಾತದ ಸ್ಥಳವನ್ನ ಆಯ್ಕೆ ಮಾಡಬೇಕು. ಅಪಘಾತದ ದಿನಾಂಕ, ಘಟನೆ ಹೇಗೆ ಆಯಿತು ಎಂಬ ವಿವರಣೆ ಒಳಗೊಂಡ ಅಪಘಾತವಾದ ವಾಹನಗಳ ಫೋಟೋ ಅಪ್‌ಲೋಡ್ ಮಾಡಬೇಕು. ಹೆಸರು, ದೂರವಾಣಿ ಸಂಪರ್ಕ ಸಂಖ್ಯೆಯನ್ನು ದಾಖಲಿಸಿ ರಿಪೋರ್ಟ್ ಸಬ್‌ಮಿಟ್ ಮಾಡಿದರೆ ನಿಮ್ಮ ದೂರು ದಾಖಲಾಗಲಿದೆ.

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

## ಕಿತ್ತಳೆ ಮಾರ್ಗದ ಕಾಮಗಾರಿಗೆ 1,092 ಮರಗಳ ಮಾರಣಹೋಮ




**ಬೆಂಗಳೂರು**: ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಅಭಿವೃದ್ಧಿಯ ಹೆಸರಿನಲ್ಲಿ ಮರಗಳು ಕಣ್ಮರೆಯಾಗುತ್ತಿರುವುದು ಒಂದೆಡೆಯಾದರೆ, ಬೆಂಗಳೂರು ಮೆಟ್ರೋ ರೈಲ್ ಕಾರ್ಪೊರೇಷನ್ ಲಿಮಿಟೆಡ್ (ಬಿಎಂಆರ್‌ಸಿಎಲ್) ಮೂರನೇ ಹಂತದ ಮೆಟ್ರೋ ಕಾಮಗಾರಿಗಾಗಿ ಸಾವಿರಾರು ಮರಗಳನ್ನು ಕಡಿಯಲು ಮುಂದಾಗಿದೆ. ಈ ಕ್ರಮವು ಪರಿಸರವಾದಿಗಳ ಆಕ್ರೋಶಕ್ಕೆ ಕಾರಣವಾಗಿದೆ. ಕಿತ್ತಳೆ ಮಾರ್ಗದ ಕಾಮಗಾರಿಗಾಗಿ 1,092 ಮರಗಳನ್ನು ಕಡಿಯಲು ಅಥವಾ ಸ್ಥಳಾಂತರಿಸಲು ಬಿಎಂಆರ್‌ಸಿಎಲ್ ತೀರ್ಮಾನಿಸಿದ್ದು, ಈ ವಿಷಯವು ನಗರದಲ್ಲಿ ತೀವ್ರ ಚರ್ಚೆಗೆ ಗುರಿಯಾಗಿದೆ.

ಬೆಂಗಳೂರಿನಲ್ಲಿ ಈಗಾಗಲೇ ಅಭಿವೃದ್ಧಿಯ ಹೆಸರಿನಲ್ಲಿ ಸಾವಿರಾರು ಮರಗಳನ್ನು ಕಡಿಯಲಾಗಿದ್ದು, ಇದರಿಂದ ನಗರದ ತಾಪಮಾನ ಏರಿಕೆಯಾಗಿ, ಗಾಳಿಯ ಗುಣಮಟ್ಟ ಕುಸಿದಿದೆ. ಈಗ ಮತ್ತೆ, ಮೆಟ್ರೋದ ಮೂರನೇ ಹಂತದ ಯೋಜನೆಯಡಿ, ಒಟ್ಟು 44.65 ಕಿಲೋಮೀಟರ್ ಉದ್ದದ ಎರಡು ಕಾರಿಡಾರ್‌ಗಳಿಗಾಗಿ 1,092 ಮರಗಳನ್ನು ಕಡಿಯಲು ಅಥವಾ ಸ್ಥಳಾಂತರಿಸಲು ಬಿಎಂಆರ್‌ಸಿಎಲ್ ಯೋಜನೆ ರೂಪಿಸಿದೆ. ಮೊದಲ ಕಾರಿಡಾರ್ ಜೆ.ಪಿ. ನಗರ 4ನೇ ಹಂತದಿಂದ ಕೆಂಪಾಪುರದವರೆಗೆ 32.15 ಕಿಲೋಮೀಟರ್ ಉದ್ದವಿದ್ದು, 21 ನಿಲ್ದಾಣಗಳನ್ನು ಒಳಗೊಂಡಿದೆ. ಎರಡನೇ ಕಾರಿಡಾರ್ ಹೊಸಹಳ್ಳಿಯಿಂದ ಕಡಬಗೆರೆವರೆಗೆ 12.50 ಕಿಲೋಮೀಟರ್ ಉದ್ದವಿದ್ದು, 9 ನಿಲ್ದಾಣಗಳನ್ನು ಹೊಂದಿದೆ. ಈ ಯೋಜನೆಗೆ 15,611 ಕೋಟಿ ರೂಪಾಯಿಗಳ ವೆಚ್ಚದ ಅಂದಾಜು ಮಾಡಲಾಗಿದೆ.

ಪರಿಸರವಾದಿಗಳು ಮತ್ತು ಸ್ಥಳೀಯ ನಿವಾಸಿಗಳು ಈ ಕಾಮಗಾರಿಯಿಂದಾಗಿ ಮರಗಳ ಕಡಿತದ ವಿರುದ್ಧ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಸ್ಥಳೀಯ ನಿವಾಸಿಯಾದ ಇನಾಯತ್ ಮಾತನಾಡಿ, ಮೆಟ್ರೋ ಕಾಮಗಾರಿಯಿಂದ ಸಂಚಾರ ಸೌಲಭ್ಯ ಸಿಗುವುದು ಸಂತೋಷದ ವಿಷಯ. ಆದರೆ, ಇರುವ ಮರಗಳನ್ನೆಲ್ಲ ಕಡಿದರೆ ಶುದ್ಧ ಗಾಳಿಯಿಲ್ಲದೆ ಉಸಿರಾಡುವುದು ಹೇಗೆ ? ಒಂದು ಮರ ಕಡಿದರೆ ಹತ್ತು ಗಿಡಗಳನ್ನು ನೆಡಬೇಕೆಂಬ ನಿಯಮವನ್ನು ಬಿಎಂಆರ್‌ಸಿಎಲ್ ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ಹಿಂದೆ, ಕಿತ್ತಳೆ ಮಾರ್ಗದ ಕಾಮಗಾರಿಗಾಗಿ 11,000 ಮರಗಳನ್ನು ಕಡಿಯಲು ಬಿಎಂಆರ್‌ಸಿಎಲ್ ಯೋಜನೆ ರೂಪಿಸಿತ್ತು. ಆದರೆ, ಪರಿಸರವಾದಿಗಳ ತೀವ್ರ ಆಕ್ಷೇಪದಿಂದಾಗಿ ಈ ಸಂಖ್ಯೆಯನ್ನು 6,500ಕ್ಕೆ ಇಳಿಸಲಾಯಿತು.

ಆದರೂ, ಪರಿಸರವಾದಿಗಳು ಇದಕ್ಕೆ ಒಪ್ಪಿಗೆ ನೀಡಿರಲಿಲ್ಲ. ಇದೀಗ, ಮೂರನೇ ಹಂತದ ಕಾಮಗಾರಿಗಾಗಿ 2,183 ಮರಗಳನ್ನು ಕಡಿಯಲು ಅಥವಾ ಸ್ಥಳಾಂತರಿಸಲು ಬಿಎಂಆರ್‌ಸಿಎಲ್ ಜಿಬಿಎ (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ) ಅರಣ್ಯ ವಿಭಾಗದಿಂದ ಅನುಮತಿ ಕೋರಿದೆ. ಇದರಲ್ಲಿ ಮೊದಲ ಹಂತವಾಗಿ 1,092 ಮರಗಳನ್ನು ಕಡಿಯಲು ಅನುಮತಿ ದೊರೆತಿದ್ದು, ಒಟ್ಟಾರೆ 10,045 ಮರಗಳು ಮೆಟ್ರೋ ಕಾಮಗಾರಿಯಿಂದ ಪ್ರಭಾವಿತವಾಗಲಿವೆ.

ಪರಿಸರವಾದಿ ಅರುಣ್ ಈ ಬಗ್ಗೆ ಮಾತನಾಡಿ, ಒಂದು ಮರ ಕಡಿದರೆ ಹತ್ತು ಗಿಡಗಳನ್ನು ನೆಡಬೇಕೆಂಬ ನಿಯಮವಿದೆ. ಆದರೆ, 1,000 ಮರಗಳ ಬದಲಿಗೆ 10,000 ಗಿಡಗಳನ್ನು ಎಲ್ಲಿ ನೆಡಲಾಗುವುದು ? ಈ ಹಿಂದೆ ಕಡಿದ ಮರಗಳಿಗೆ ಬದಲಿಯಾಗಿ ನೆಟ್ಟ ಗಿಡಗಳ ಗತಿಯೇನು ? ಎಂದು ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿ ಈಗಾಗಲೇ ಶುದ್ಧ ಗಾಳಿಯ ಕೊರತೆ ಎದುರಾಗಿದ್ದು, ಮರಗಳ ಕಡಿತದಿಂದಾಗಿ ನಗರವು ದೆಹಲಿಯಂತಹ ವಾಯು ಮಾಲಿನ್ಯದ ಕೇಂದ್ರವಾಗುವ ಆತಂಕವಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

## ವೃದ್ಧಾಪ್ಯದಲ್ಲಿ ಮಹಿಳೆಯರ ಚಪಲ: ಬೆಂಗಳೂರಲ್ಲಿ ವ್ಯಕ್ತಿ ಕಳೆದುಕೊಂಡಿದ್ದು ಲಕ್ಷ ಲಕ್ಷ ಹಣ

**ಬೆಂಗಳೂರು:** ಆನ್‌ಲೈನ್ ಡೇಟಿಂಗ್ ಹೆಸರಲ್ಲಿ ವಂಚನೆಗೆ ಒಳಗಾಗಿ 63 ವರ್ಷದ ವ್ಯಕ್ತಿಯೋರ್ವರು ಲಕ್ಷ ಲಕ್ಷ ಹಣ ಕಳೆದುಕೊಂಡಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ನಗರದ ಹೊರಮಾವು ನಿವಾಸಿಗೆ ಹೈ-ಪ್ರೊಫೈಲ್ ಮಹಿಳೆಯರೊಂದಿಗೆ ಸಂಪರ್ಕ ಮಾಡಿಸುವ ಆಸೆ ತೋರಿಸಿ ವಂಚಕರು ಬರೋಬ್ಬರಿ 32 ಲಕ್ಷಕ್ಕಿಂತ ಅಧಿಕ ಹಣವನ್ನು ದೋಚಿದ್ದಾರೆ. ಅಂತಿಮವಾಗಿ ತಾನು ಮೋಸ ಹೋಗಿದ್ದೇನೆ ಎಂದು ಅರಿತ ವ್ಯಕ್ತಿ ಈ ಬಗ್ಗೆ ದೂರು ದಾಖಲಿಸಿದ್ದಾರೆ.

CEN ಕ್ರೈಂ ಪೊಲೀಸ್ ಠಾಣೆಯಲ್ಲಿ ದಾಖಲಾದ ದೂರಿನ ಪ್ರಕಾರ, ಸೆಪ್ಟೆಂಬರ್ 5ರಿಂದ ಅಕ್ಟೋಬರ್ 18ರ ಅವಧಿಯಲ್ಲಿ ಈ ವಂಚನೆ ನಡೆದಿದೆ. ವಂಚನೆಗೊಳಗಾದ ವ್ಯಕ್ತಿಗೆ ಡೇಟಿಂಗ್ ಸೇವೆ ಹೆಸರಲ್ಲಿ ಕರೆ ಬಂದಿದ್ದು, ಮಹಿಳೆಯರ ಜೊತೆ ಭೇಟಿ ಮಾಡಿಸುವ ಬಗ್ಗೆ ತಿಳಿಸಲಾಗಿದೆ. ಅಲ್ಲದೆ, ನೋಂದಣಿ ಶುಲ್ಕ ಎಂದು 1,950 ರೂ.ಗಳನ್ನ ಆನ್‌ಲೈನ್ ಮೂಲಕ ವಂಚಕರು ಪಾವತಿ ಮಾಡಿಸಿಕೊಂಡಿದ್ದಾರೆ. ಬಳಿಕ ವಾಟ್ಸ್ಯಾಪ್‌ನಲ್ಲಿ ಮೂವರು ಮಹಿಳೆಯರ ಫೋಟೋವನ್ನು ಕಳುಹಿಸಲಾಗಿದ್ದು, ಆ ಪೈಕಿ ಒಬ್ಬರನ್ನು ವ್ಯಕ್ತಿ ಆಯ್ಕೆ ಮಾಡಿದ್ದರು.

ಅವರು ಸೆಲೆಕ್ಟ್ ಮಾಡಿದ್ದ ರಿತಿಕಾ ಹೆಸರಿನ ಮಹಿಳೆಯ ದೂರವಾಣಿ ಸಂಖ್ಯೆಯನ್ನ ಶೇರ್ ಮಾಡಲಾಗಿತ್ತು. ಬಳಿಕ ರಿತಿಕಾ ಮತ್ತು ವ್ಯಕ್ತಿಯ ನಡುವೆ ಸಂವಹನ ಆರಂಭವಾಗಿದ್ದು, ಆತ್ಮೀಯತೆಯೂ ಬೆಳೆದಿತ್ತು. ನಿಮ್ಮನ್ನು ಬೇಗ ಭೇಟಿಯಾಗುವುದಾಗಿ ರಿತಿಕಾ ಕೂಡ ತಿಳಿಸಿದ್ದಳು ಎನ್ನಲಾಗಿದೆ.

ಹೀಗಿರುವಾಗ ದಸರಾ ಹಬ್ಬಕ್ಕೂ ಮೊದಲು, ತನ್ನ ಕುಟುಂಬವನ್ನು ಭೇಟಿಯಾಗಲು ತಾನು ಹೋಗುತ್ತಿದ್ದೇನೆ. ಹೀಗಾಗಿ ಕೆಲವು ದಿನಗಳ ಕಾಲ ನನಗೆ ಕರೆ ಮಾಡುವುದು ಅಥವಾ ಸಂದೇಶ ಕಳುಹಿಸುವುದನ್ನು ಮಾಡಬೇಡಿ ಎಂದು ವ್ಯಕ್ತಿಗೆ ರಿತಿಕಾ ತಿಳಿಸಿದ್ದಳು. ಇದರ ನಡುವೆ ಪ್ರೀತಿ ಎಂಬ ಹೆಸರಿನ ಮತ್ತೊಬ್ಬ ಮಹಿಳೆ ಕರೆ ಮಾಡಿದ್ದು, ರಿತಿಕಾ ಮತ್ತು ನಿಮ್ಮ ಭೇಟಿಗೆ ಅಗತ್ಯ ಸಿದ್ಧತೆ ಮಾಡುತ್ತಿದ್ದೇನೆ. ಹೀಗಾಗಿ ವಿವಿಧ ವ್ಯವಸ್ಥೆಗಳಿಗೆ ಹಣ ನೀಡುವಂತೆ ತಿಳಿಸಿದ್ದಳು. ಆಕೆಯ ಮಾತು ನಂಬಿ ವ್ಯಕ್ತಿ ಬೇರೆ ಬೇರೆ ಬ್ಯಾಂಕ್‌ನ ಮೂರು ಖಾತೆಗಳಿಗೆ ಹಣ ವರ್ಗಾಯಿಸಿದ್ದಾರೆ. ಲಕ್ಷ ಲಕ್ಷ ಹಣ ಪಾವತಿ ಬಳಿಕವೂ ಪ್ರೀತಿ ಮತ್ತೆ ಹೊಸ ವರಸೆ ತೆಗೆದು ಹಣ ಕೇಳುತ್ತಿದ್ದಳು.

ಆಗ ಹಣ ನೀಡಲು ವ್ಯಕ್ತಿ ನಿರಾಕರಿಸಿದ್ದು, ಈ ವೇಳೆ ಕಾನೂನು ಕ್ರಮದ ಬೆದರಿಕೆಯನ್ನೂ ಆಕೆ ಹಾಕಿದ್ದಾಳೆ. ಹೀಗಾಗಿ ತಾನು ವಂಚನೆಗೆ ಒಳಗಾದ ಬಗ್ಗೆ ವ್ಯಕ್ತಿಗೆ ಜ್ಞಾನೋದಯವಾಗಿದ್ದು, ಅಷ್ಟರಲ್ಲಿ 32.2 ಲಕ್ಷ ರೂ. ಕಳೆದುಕೊಂಡಿದ್ದರು.

## ಬುಕ್ ಮಾಡಿದ್ದು1.85 ಲಕ್ಷ ರೂ. ಸ್ಯಾಮ್ಸಂಗ್ ಫೋನ್ ಡೆಲಿವೆರಿ ಆಗಿದ್ದು ಟೈಲ್ಸ್‌ಪೀಸ್



**ಬೆಂಗಳೂರು**: ಆನ್ಲೈನ್‌ನಲ್ಲಿ 1.85 ಲಕ್ಷ ರೂಪಾಯಿ ಮೌಲ್ಯದ ಸ್ಯಾಮ್ಸಂಗ್ ಫೋನ್ ಅಡ್ವಾನ್ಸ್ ಬುಕ್ ಮಾಡಿದ ಟೆಕ್ಕಿಗೆ, ಡೆಲಿವರಿ ಬಾಕ್ಸ್‌ನಲ್ಲಿ ಫೋನ್ ಬದಲು ಕಲ್ಲು ಸಿಕ್ಕಿರುವ ಘಟನೆ ಬೆಂಗಳೂರಿನ ಕುಮಾರಸ್ವಾಮಿ ಲೇಔಟ್ ಪ್ರದೇಶದಲ್ಲಿ ನಡೆದಿದೆ.

ಸಾಫ್ಟ್‌ವೇರ್ ಎಂಜಿನಿಯರ್ ಪ್ರೇಮಾನಂದ್ ಅವರು ಅಮೆಜಾನ್ ಆಪ್‌ನಿಂದ ಈ ದುಬಾರಿ ಫೋನ್ ಅನ್ನು ಖರೀದಿಸಿದ್ದರು. ನಿಗದಿತ ದಿನಾಂಕದಂದು ಉತ್ಪನ್ನದ ಡೆಲಿವರಿ ಆಗಿ, ಬಾಕ್ಸ್ ಅವರಿಗೆ ಒಪ್ಪಿಸಲ್ಪಟ್ಟಿತು. ಆದರೆ, ಬಾಕ್ಸ್ ತೆರೆದು ನೋಡಿದಾಗ ಅದರೊಳಗೆ ಫೋನ್ ಬದಲು ಚೌಕಾಕಾರದ ಕಲ್ಲು ಇರುವುದು ಕಂಡು ಬಂತು.

ಫೋನ್‌ನ ತೂಕಕ್ಕೆ ಸಮನಾದ ತೂಕದ ಈ ಕಲ್ಲನ್ನು ಬಾಕ್ಸ್‌ನಲ್ಲಿ ಇಟ್ಟು ವಂಚನೆ ಮಾಡಲಾಗಿದೆ. ಪ್ರೇಮಾನಂದ್ ಅವರು ಫೋನ್‌ಗಾಗಿ ಪೂರ್ಣ ಮೊತ್ತವನ್ನು ಮುಂಗಡವಾಗಿ ಪಾವತಿಸಿದ್ದರು. ಘಟನೆಯ ನಂತರ ಡೆಲಿವರಿ ಬಾಯ್‌ಗೆ ಸಂಪರ್ಕಿಸಲು ಪ್ರಯತ್ನಿಸಿದರೆ, ಯಾವುದೇ ಪ್ರತಿಕ್ರಿಯೆ ಸಿಗಲಿಲ್ಲ.

ನಂತರ, ಪ್ರೇಮಾನಂದ್ ಅವರು ಕುಮಾರಸ್ವಾಮಿ ಲೇಔಟ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪೊಲೀಸರು ಎನ್ಸಿಆರ್‌ಪಿ ಪೋರ್ಟಲ್‌ನ ಮೂಲಕ ದೂರು ಸ್ವೀಕರಿಸಿ, ವಂಚನೆಯ ಪ್ರಕರಣವನ್ನು ದಾಖಲಿಸಿದ್ದಾರೆ. ಆನ್ಲೈನ್ ಖರೀದಿದಾರರ ಸುರಕ್ಷತೆ ಮತ್ತು ಡೆಲಿವರಿ ಪ್ರಕ್ರಿಯೆಯಲ್ಲಿ ಉಂಟಾಗಿರುವ ಈ ತೊಡಕು ಕುರಿತು ತನಿಖೆ ನಡೆಸಲಾಗುತ್ತಿದೆ.

## ವಿದ್ಯುತ್ ಬಿಲ್ ಕಟ್ಟಿಲ್ಲವೆಂದು ವೃದ್ಧೆಯ ಮೇಲೆ ಚೆಸ್ಕಾಂ ಸಿಬ್ಬಂದಿ ದೌರ್ಜನ್ಯ



**ಬೆಂಗಳೂರು**: ಸಿಎಂ ಸಿದ್ದರಾಮಯ್ಯ ಕ್ಷೇತ್ರ ವರುಣಾದಲ್ಲಿ ಚೆಸ್ಕಾಂ ಅಧಿಕಾರಿಗಳು ಗೂಂಡಾವರ್ತನೆ ತೋರಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ನಂಜನಗೂಡು ತಾಲೂಕಿನ ಚಿಕ್ಕಹೊಮ್ಮದಲ್ಲಿ, ಕರೆಂಟ್ ಬಿಲ್ ಕಟ್ಟಿಲ್ಲವೆಂದು ಚೆಸ್ಕಾಂ ಅಧಿಕಾರಿಗಳು 80 ವರ್ಷದ ಅಂಧ ವೃದ್ಧೆಯನ್ನು ತಳ್ಳಾಡಿ ದೌರ್ಜನ್ಯ ಎಸಗಿದ್ದಾರೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಈ ಘಟನೆ ಬಗ್ಗೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮಹದೇವಮ್ಮ ಎಂಬ 80 ವರ್ಷದ ಅಂಧ ವೃದ್ಧೆಯ ಮನೆಗೆ ಚೆಸ್ಕಾಂ ಸಿಬ್ಬಂದಿ ಬಂದು 5,000 ರೂ. ಕರೆಂಟ್ ಬಿಲ್ ಪಾವತಿಸಲು ಒತ್ತಾಯಿಸಿದ್ದಾರೆ. ಈ ವೇಳೆ, ತಾವು ಭಾಗ್ಯಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಪಡೆಯುತ್ತಿರುವುದಾಗಿಯೂ, ತಪ್ಪು ಬಿಲ್ ಬಂದಿದ್ದು, ಅದನ್ನು ಕಟ್ಟಲು ಸಾಧ್ಯವಿಲ್ಲವೆಂದು ಅವರು ತಿಳಿಸಿದ್ದರು. ಆದರೂ ಸಿಬ್ಬಂದಿ ಬಲವಂತವಾಗಿ ಫ್ಯೂಸ್ ಮತ್ತು ಮೀಟರ್ ಬೋರ್ಡ್ ತೆಗೆದುಹಾಕಲು ಯತ್ನಿಸಿದ್ದಾರೆ.

ಈ ವೇಳೆ ವೃದ್ಧೆ ಮಹದೇವಮ್ಮ ವಿರೋಧ ವ್ಯಕ್ತಪಡಿಸಿದಾಗ, 'ನಮ್ಮ ಕರ್ತವ್ಯಕ್ಕೆ ಅಡ್ಡಿಯಾಗುತ್ತಿದ್ದೀಯಾ' ಎಂದು ಸಿಬ್ಬಂದಿ ಕೋಪಗೊಂಡು ತಳ್ಳಿದ್ದಾರೆ ಎನ್ನಲಾಗಿದೆ. ಈ ಘಟನೆ ವೇಳೆ ಅಂಧ ವೃದ್ಧೆ ಕೆಳಗೆ ಬಿದ್ದು ಗಾಯಗೊಂಡಿದ್ದಾರೆ. ಅವರನ್ನು ತಕ್ಷಣ ಚಾಮರಾಜನಗರ ಸಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ಚಿಕಿತ್ಸೆ ಬಳಿಕ ಮಹದೇವಮ್ಮ ಅವರನ್ನು ಡಿಸ್ಚಾರ್ಜ್ ಮಾಡಲಾಗಿದೆ.

# ನಮ್ಮ ಮೆಟ್ರೋದಲ್ಲಿ ಶ್ವಾಸಕೋಶ ಸಾಗಾಟ; ಕೇವಲ 61 ನಿಮಿಷದಲ್ಲಿ ಆಸ್ಪತ್ರೆ ತಲುಪಿದ ವೈದ್ಯರ ತಂಡ



**ಬೆಂಗಳೂರು:** ನಮ್ಮ ಮೆಟ್ರೋ (Namma Metro) ಸಿಲಿಕಾನ್ ಸಿಟಿ ಜನರ ನೆಚ್ಚಿನ ಸಾರಿಗೆ ವ್ಯವಸ್ಥೆ ಮಾತ್ರ ಅಲ್ಲದೇ, ಸಾವು-ಬದುಕಿನ ಮಧ್ಯೆ ಹೋರಾಡುತ್ತಿರುವ ರೋಗಿಗಳ ಪಾಲಿಗೂ ವರದಾನವಾಗಿದೆ. ಏಕೆಂದರೆ ನಮ್ಮ ಮೆಟ್ರೋ ಮೂಲಕ ಶ್ವಾಸಕೋಶವನ್ನು (lungs) ಯಶಸ್ವಿಯಾಗಿ ಸಾಗಾಟ ಮಾಡಲಾಗಿದೆ. ಯಶವಂತಪುರದಿಂದ ನಾರಾಯಣ ಹೆಲ್ತ್ ಸಿಟಿಗೆ ಕೇವಲ 61 ನಿಮಿಷದಲ್ಲಿ ವೈದ್ಯರ ತಂಡ ಆಸ್ಪತ್ರೆ ತಲುಪಿದೆ.

ನಮ್ಮ ಮೆಟ್ರೋ ರೈಲಿನಲ್ಲಿ ಈಗಾಗಲೇ ಹೃದಯ ಸೇರಿದಂತೆ ಯಶಸ್ವಿಯಾಗಿ ಅಂಗಾಂಗ ಸಾಗಾಟ ಮಾಡಲಾಗಿದೆ. ಇದೀಗ ಶ್ವಾಸಕೋಶ ಸಾಗಾಟ ಮಾಡಲಾಗಿದೆ. ಟ್ರಾಫಿಕ್ ಸಮಸ್ಯೆ ಹಿನ್ನೆಲೆ ನಮ್ಮ ಮೆಟ್ರೋ ಆಯ್ಕೆ ಮಾಡಿಕೊಂಡ ವೈದ್ಯರ ತಂಡ, ಯಶವಂತಪುರ ಟು ಆರ್.ವಿ ರೋಡ್‌ವರೆಗೆ ಗ್ರೀನ್ ಲೈನ್‌ನಲ್ಲಿ ಸಂಚರಿಸಿ, ಬಳಿಕ ಆರ್.ವಿ ರೋಡ್ ಟು ಬೊಮ್ಮಸಂದ್ರವರೆಗೆ ಹಳದಿ ಲೈನ್‌ನಲ್ಲಿ ಸಂಚಾರ ಮಾಡಿದ್ದಾರೆ.

ಕೇವಲ 61 ನಿಮಿಷದಲ್ಲಿ ಶ್ವಾಸಕೋಶವನ್ನು ವೈದ್ಯರ ತಂಡ ನಾರಾಯಣ ಹೆಲ್ತ್ ಸಿಟಿಗೆ ರವಾನಿಸುವಲ್ಲಿ ಯಶಸ್ವಿಯಾಗಿದೆ. ಬಿಎಂಆರ್ ಸಿಎಲ್ ಮತ್ತು ವೈದ್ಯಕೀಯ ತಂಡದ ಸಹಯೋಗದಲ್ಲಿ ನಡೆದ ಕಾರ್ಯಾಚರಣೆ ಯಶಸ್ವಿಯಾಗಿದೆ. ಸದ್ಯ ವೈದ್ಯರ ತಂಡದ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

ಮೆಟ್ರೋ ಮೂಲಕ ಯಶಸ್ವಿಯಾಗಿ ಹಾರ್ಟ್ ಶಿಫ್ಟಿಂಗ್

ಇನ್ನು ಇತ್ತೀಚೆಗೆ ನಮ್ಮ ಮೆಟ್ರೋ ರೈಲಿನ ಮೂಲಕ ಯಶಸ್ವಿಯಾಗಿ ಹೃದಯ ಸಾಗಾಟ ಮಾಡಲಾಗಿತ್ತು. ಆ ಮೂಲಕ ಎರಡನೇ ಬಾರಿ ಯಶಸ್ವಿಯಾಗಿ ಅಂಗಾಂಗ ಸಾಗಾಟ ಮಾಡಿದಂತಾಗಿತ್ತು. ಯಶವಂತಪುರ ಸ್ಪರ್ಶ್ ಆಸ್ಪತ್ರೆಯಿಂದ ಶೇಷಾದ್ರಿಪುರ ಬಳಿಯ ಅಪೋಲೋ ಆಸ್ಪತ್ರೆಗೆ ಹೃದಯವನ್ನು ಸಾಗಿಸಲಾಗಿತ್ತು.

ಯಶವಂತಪುರ ಇಂಡಸ್ಟ್ರಿ ಮೆಟ್ರೋ ಸ್ಟೇಷನ್‌ನಿಂದ ಸಂಪಿಗೆ ರೋಡ್ ಸ್ಟೇಷನ್‌ವರೆಗೆ ಮೆಟ್ರೋದಲ್ಲಿ ಹೃದಯ ಸಾಗಿಸಲಾಗಿತ್ತು. ಸ್ಪರ್ಶ್ ಆಸ್ಪತ್ರೆಯಿಂದ ಆ್ಯಂಬುಲೆನ್ಸ್ ಮೂಲಕ ಯಶವಂತಪುರ ಇಂಡಸ್ಟ್ರಿವರೆಗೆ ಹೃದಯವನ್ನು ತೆಗೆದುಕೊಂಡು ಹೋಗಲಾಗಿತ್ತು. ಅಲ್ಲಿಂದ ಮೆಟ್ರೋ ಮೂಲಕ ಸಂಪಿಗೆ ರೋಡ್ ಮೆಟ್ರೋ ಸ್ಟೇಷನ್‌ವರೆಗೆ ಶಿಫ್ಟ್ ಮಾಡಿದರೆ, ಅಲ್ಲಿಂದ ಮತ್ತೆ ಆ್ಯಂಬುಲೆನ್ಸ್ ಮೂಲಕ ಶೇಷಾದ್ರಿಪುರ ಅಪೋಲೋ ಆಸ್ಪತ್ರೆಗೆ ಹೃದಯವನ್ನು ಶಿಫ್ಟ್ ಮಾಡಲಾಗಿತ್ತು. ಎಂದಿನಂತೆ ಪ್ರಯಾಣಿಕರು ಪ್ರಯಾಣ ಮಾಡುವ ಮೆಟ್ರೋ ರೈಲಿನ ಒಂದು ಕೋಚ್ ಅನ್ನು ಹೃದಯ ಸಾಗಿಸಲು ಮೀಸಲಿಡಲಾಗಿತ್ತು.

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು , ಸರ್ವರಿಗೂ ಆತ್ಮೀಯ ಆಮಂತ್ರಣ**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.